ಕನ್ನಡ ದಿನಪತ್ರಿಕೆ
16 ಎಪ್ರಿಲ್ । ಮಂಗಳವಾರ
16 APRIL 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 ಸಂಪುಟ – 5 ಸಂಚಿಕೆ – 50 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26




## ಬಿಜೆಪಿ ಅಭ್ಯರ್ಥಿ ಪ್ರಹ್ಲಾದ್ ಜೋಶಿ ನಾಮಪತ್ರ ಸಲ್ಲಿಕೆ

ಹುಬ್ಬಳ್ಳಿ: ಲೋಕಸಭಾ ಚುನಾವಣೆಗೆ ಎರಡನೇ ಹಂತದ ಮತದಾನ ನಡೆಯಲಿರುವ 14 ಲೋಕಸಭಾ ಕ್ಷೇತ್ರಗಳಲ್ಲಿ ನಾಮಪತ್ರ ಸಲ್ಲಿಕೆ ಆರಂಭವಾಗಿದೆ. ಧಾರವಾಡ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪ್ರಹ್ಲಾದ್ ಜೋಶಿ ಇಂದು ನಾಮಪತ್ರ ಸಲ್ಲಿಸಿದರು.

ನಾಮಪತ್ರ ಸಲ್ಲಿಕೆಗೂ ಮುನ್ನ ಪ್ರಹ್ಲಾದ್ ಜೋಶಿ ಹುಬ್ಬಳ್ಳಿಯ ರಾಘವೇಂದ್ರ ಮಠ, ಸಿದ್ಧಾರೂಢ ಮಠಕ್ಕೆ ಭೇಟಿ ನೀಡಿದರು. ಬಳಿಕ ಧಾರವಾಡದ ಶಿವಾಜಿ ಸರ್ಕಲ್‌ನಿಂದ ಮುಖ್ಯ ಚುನಾವಣಾ ಅಧಿಕಾರಿಗಳ ಕಚೇರಿ ವರೆಗೆ ಮೆರವಣಿಗೆ ಮೂಲಕ ತೆರಳಿ ನಾಮಪತ್ರ ಸಲ್ಲಿಕೆ ಮಾಡಿದ್ದಾರೆ. ಪ್ರಹ್ಲಾದ್ ಜೋಶಿ ನಾಮಪತ್ರ ಸಲ್ಲಿಕೆ ಹಿನ್ನೆಲೆಯಲ್ಲಿ ಹುಬ್ಬಳ್ಳಿಯ ಭವಾನಿ ನಗರದಲ್ಲಿರುವ ಅವರ ಮನೆಯನ್ನು ಹೂವಿನಿಂದ ಅಲಂಕಾರ ಮಾಡಲಾಗಿದೆ. ನಾಮಪತ್ರ ಸಲಿಕೆ ವೇಳೆ ಮಾಜಿ ಸಿಎಂ ಬಿ.ಎಸ್. ಯಡಿಯುರಪ್ಪ, ಬಸವರಾಜ್ ಬೊಮ್ಮಾಯಿ ಉಪಸ್ಥಿತ–ರಿದ್ದರು.

# ವಿಜಯ ಯಾತ್ರೆಗೆ ಮುನ್ನುಡಿ ಬರೆದ ಮೃಣಾಲ ಹೆಬ್ಬಾಳಕರ್

## ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಜನಸ್ತೋಮದ ಬೆಂಬಲದೊಂದಿಗೆ ತಮ್ಮ ನಾಮಪತ್ರ ಸಲ್ಲಿಕೆ

ಬೆಳಗಾವಿ: ಬೆಳಗಾವಿಯ ಇತಿಹಾಸದಲ್ಲಿ ಸೋಮವಾರ ಹೊಸ ದಾಖಲೆ ಸೃಷ್ಟಿಯಾಯಿತು. ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಸಾಗರೋಪಾದಿಯ ಜನಸ್ತೋಮದ ಬೆಂಬಲದೊಂದಿಗೆ ತಮ್ಮ ನಾಮಪತ್ರ ಸಲ್ಲಿಸಿದರು. ನೋಡಿದ ಜನರು ಇದು ಕೇವಲ ನಾಮಪತ್ರ ಸಲ್ಲಿಕೆಯಲ್ಲ, ಇದು ವಿಜಯ ಯಾತ್ರೆ ಎಂದು ಬಣ್ಣಿಸುತ್ತಿದ್ದರು.

ಬೆಳ್ಳಂಬೆಳಗ್ಗೆ ಕುಟುಂಬ ಸಮೇತ ಸುಳೇಬಾವಿ ಮಹಾಲಕ್ಷ್ಮೀ ದೇವಿಗೆ ಪೂಜೆ ಸಲ್ಲಿಸಿ ಬಂದ ಮೃಣಾಲ ಹೆಬ್ಬಾಳಕರ್, ನಂತರ ಮನೆಯಲ್ಲಿ ಗೋ ಪೂಜೆ ನೆರವೇರಿಸಿದರು. ಆ ವೇಳೆಗೆ ಮನೆಗೆ ಸಾಲು ಸಾಲು ಮಠಾಧೀಶರು ಆಗಮಿಸಿ ಆಶೀರ್ವದಿಸಿದರು. ಮೃಣಾಲ ಹೆಬ್ಬಾಳಕರ್ ಮತ್ತು ಪತ್ನಿ ಡಾ.ಹಿತಾ ಮನೆಗೆ ಬಂದ ಸ್ವಾಮೀಜಿಗಳ ಪಾದಪೂಜೆ ಮಾಡಿದರು.

ತದನಂತರ ಹಿಂಡಲಗಾ ಗಣಪತಿ ದೇವಸ್ಥಾನಕ್ಕೆ ತೆರಳಿ ಪೂಜೆ ಸಲ್ಲಿಸಿದರು.



ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಸೇರಿದಂತೆ ಕುಟುಂಬ ಸದಸ್ಯರು, ಅಪಾರ ಸಂಖ್ಯೆಯಲ್ಲಿ ಮುಖಂಡರು, ಕಾರ್ಯಕರ್ತರು ಜೊತೆಗಿದ್ದರು.

ಅಲ್ಲಿಂದ ನೇರವಾಗಿ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ನಾಲ್ಕು ಸೆಟ್ ನಾಮಪತ್ರ ಸಲ್ಲಿಸಿದರು. ಕೆಪಿಸಿಸಿ ಅಧ್ಯಕ್ಷ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ಜಿಲ್ಲೆಯ ಶಾಸಕರು, ಮುಖಡರು ಸಾಥ್ ನೀಡಿದರು.



ಇದಾದ ಬಳಿಕ ನಗರದ ಸಿಪಿಎಡ್ ಮೈದಾನದಿಂದ ನಡೆದ ಮೆರವಣಿಗೆ ಕಣ್ಣು ಕೋರೈಸುವಂತಿತ್ತು.

ಸುಮಾರು ಒಂದೂವರೆ ಕಿಮೀ ರಸ್ತೆಯುದ್ದಕ್ಕೂ ಜನಸಾಗರವೇ ತುಂಬಿತ್ತು. ವೈವಿಧ್ಯಮಯ ಕಲಾತಂಡಗಳು, ಅಪಾರ ಸಂಖ್ಯೆಯಲ್ಲಿ ಮಹಿಳೆಯರು, ಯುವಕರು, ವಯೋವೃದ್ಧರು ಮೆರವಣಿಗೆಯಲ್ಲಿ ಭಾಗವಹಿಸಿ, ಮೃಣಾಲ ಹೆಬ್ಬಾಳಕರ್ ಅವ–ರಿಗೆ ಶುಭ ಕೋರಿದರು. ಕೆಪಿಸಿಸಿ ಅಧ್ಯಕ್ಷ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ಜಿಲ್ಲೆಯ ಶಾಸಕರು, ಮುಖಡರು ಮೆರವಣಿಗೆಯಲ್ಲಿ ಸಹ ಭಾಗವಹಿಸಿದ್ದರು.

ಮೆರವಣಿಗೆ ಅಂತ್ಯದಲ್ಲಿ ಮಾತನಾಡಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಕಾರ್ಯಕರ್ತರ ಉತ್ಸಾಹ ನೋಡಿದರೆ 2 ಲಕ್ಷಕ್ಕೂ ಹೆಚ್ಚು ಮತಗಳಿಂದ ಗೆಲುವು ಖಚಿತ ಎಂದರು. ರ್ಯಾಲಿ ಈಗ ಮುಕ್ತಾಯವಾಗಿದೆ, ಆದರೆ ವಿಜಯ ಯಾತ್ರೆ ಇಲ್ಲಿಂದ ಆರಂಭವಾಗಿದೆ ಎಂದು ಹೇಳಿದರು.

ಒಟ್ಟಾರೆ, ವಿರೋಧಿಗಳು ಬೆಚ್ಚಿ ಬೀಳುವಂತೆ ಅದ್ದೂರಿಯಾಗಿ ನಡೆದ ಮೆರವಣಿಗೆ, ಬೆಳಗಾವಿ ಕಾಂಗ್ರೆಸ್ ಮಯವೆನ್ನುವಂತೆ ಮಾಡಿತು.

## ಶೆಟ್ಟರ್ ನಾಮಪತ್ರ ಸಲ್ಲಿಕೆ



ಬೆಳಗಾವಿ : ಮಾಜಿ ಸಿಎಂ ಜಗದೀಶ್ ಶೆಟ್ಟರ್ ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಸೋಮವಾರ ನಾಮಪತ್ರ ಸಲ್ಲಿಸಿದರು.

ಸಾಂಕೇತಿಕವಾಗಿ ನಾಮಪತ್ರ ಸಲ್ಲಿಸಿದ ಸಂದರ್ಭದಲ್ಲಿ ಶೆಟ್ಟರ್ ಪರವಾಗಿ ಸಂಸದೆ ಮಂಗಳಾ ಅಂಗಡಿ, ಮಾಜಿ ಸಚಿವ ರಮೇಶ್ ಜಾರಕಿಹೊಳಿ, ಶಾಸಕ ಹನುಮಂತ ನಿರಾಣಿ, ಮಾಜಿ ಶಾಸಕ ಅನೀಲ್ ಬೆನಕೆ ಜೊತೆಯಾದರು. ಬರುವ ಬುಧವಾರ ಮತ್ತೊಮ್ಮೆ ಬಿಜೆಪಿ ಹಿರಿಯ ನಾಯಕರ ಜೊತೆಗೂಡಿ ಜಗದೀಶ್ ಶೆಟ್ಟರ್ ನಾಮಪತ್ರ ಸಲ್ಲಿಸಲಿದ್ದಾರೆ.

**ಶೆಟ್ಟರ್ ಆಸ್ತಿ ವಿವರ:**

ಜಗದೀಶ್ ಶೆಟ್ಟರ್ ಒಟ್ಟು ಆಸ್ತಿ ಮೌಲ್ಯ – ಒಟ್ಟು ಆಸ್ತಿ 12.45 ಕೋಟಿ.

ಚರಾಸ್ತಿ 2.63 ಕೋಟಿ, ಸ್ಥಿರಾಸ್ತಿ 9.82 ಕೋಟಿ.

ಸಾಲ– 57.26 ಲಕ್ಷ, ಹಾಗೂ 15.37 ಲಕ್ಷ ನಗದು ಹೊಂದಿದ್ದಾರೆ.

43.94 ಲಕ್ಷ ಮೌಲ್ಯದ ಚಿನ್ನಾಭರಣ ಇದ್ದು ಇವರ ಬಳಿ ಸ್ವಂತ ವಾಹನ ಇಲ್ಲ.

ಶೆಟ್ಟರ್ ಪತ್ನಿ ಶಿಲ್ಪಾ ಶೆಟ್ಟರ್ ಹೆಸರಿನಲ್ಲಿ 2.50 ಲಕ್ಷ ನಗದು.

ಚರಾಸ್ತಿ 91.10 ಲಕ್ಷ , ಸ್ಥಿರಾಸ್ತಿ 1ಲಕ್ಷ ಹಾಗೂ 14.40 ಲಕ್ಷ ಸಾಲ ಇದೆ.

70.90 ಲಕ್ಷ ಮೌಲ್ಯದ 1.100 ಕೆಜಿ. ಚಿನ್ನ, 3 ಕೆಜಿ. ಬೆಳ್ಳಿ ಜಗದೀಶ್ ಶೆಟ್ಟರ್ ಹೊಂದಿದ್ದಾರೆ.

## ಏಪ್ರಿಲ್ 18ಕ್ಕೆ ನಾಮಪತ್ರ ಸರಳ ರೀತಿಯಲ್ಲಿ ಸಲ್ಲಿಸುತ್ತೇನೆ: ಪ್ರಿಯಂಕಾ ಜಾರಕಿಹೊಳಿ



ಬೆಳಗಾವಿ: ಚಿಕ್ಕೋಡಿ ಲೋಕಸಭೆ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ನಾನು ಏಪ್ರಿಲ್ 18 ರಂದು ನಾಮಪತ್ರವನ್ನು ಸರಳ ರೀತಿಯಲ್ಲಿ ಸಲ್ಲಿಸಲಿದ್ದೇನೆ. ಕಾರಣ ತಾವೆಲ್ಲರೂ ಸಹಕರಿಸಬೇಕು ಎಂದು ಚಿಕ್ಕೋಡಿ ಲೋಕಸಭೆ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆಯಲ್ಲಿ ತಿಳಿಸಿದ ಅವರು, ಏಪ್ರಿಲ್ 18 ರಂದು ನಾಮಪತ್ರವನ್ನು ಸರಳ ರೀತಿಯಲ್ಲಿ ಸಲ್ಲಿಸಲಿದ್ದೇನೆ.

ಅಂದು ಕೆಲವೇ ಕೆಲವು ಜನಪ್ರತಿನಿಧಿಗಳು ನನಗೆ ಸಾಥ್ ನೀಡಲಿದ್ದಾರೆ. ಸುಡು ಬಿಸಿಲಿನಲ್ಲಿ ಕಾರ್ಯಕರ್ತರು ಹಾಗೂ ಬೃಹತ್ ರ್ಯಾಲಿಯಿಂದ ಸಾಮಾನ್ಯ ಜನರಿಗೆ ತೊಂದರೆಯಾಗದಂತೆ ನೋಡಿಕೊಳ್ಳಲು ತಂದೆ, ಲೋಕೋಪಯೋಗಿ ಇಲಾಖೆ ಸಚಿವ ಸತಶ್ ಜಾರಕಿಹೊಳಿ ಅವರು ತಿಳಿಸಿದ್ದಾರೆ. ಆದ್ದರಿಂದ ತಂದೆಯವರ ಮಾರ್ಗದರ್ಶನದಂತೆ ಸರಳವಾಗಿ ತೆರಳಿ ನಾಮಪತ್ರ ಸಲ್ಲಿಸುತ್ತೇನೆ ಎಂದು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಣ್ಣಾಸಾಬ್ ಜೊಲ್ಲೆ ನಾಮಪತ್ರ ಸಲ್ಲಿಕೆ



ಬೆಳಗಾವಿ: ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಣ್ಣಾಸಾಬ್ ಜೊಲ್ಲೆ ಅವರು ಸೋಮವಾರ ಚುನಾವಣಾಧಿಕಾರಿ ರಾಹುಲ್ ಶಿಂದೆ ಅವರಿಗೆ ತಮ್ಮ ಉಮೇದುವಾರಿಕೆ ಸಲ್ಲಿಸಿದ್ದಾರೆ.

ನಾಮಪತ್ರ ಸಲ್ಲಿಕೆ ಸಂದರ್ಭದಲ್ಲಿ ಮಾಜಿ ಶಾಸಕ ಮಹೇಶ್ ಕುಮಠಳ್ಳಿ, ಶ್ರೀಮಂತ ಪಾಟೀಲ್, ರಾಯಭಾಗ ಶಾಸಕ ದುರ್ಯೋಧನ ಐಹೊಳೆ ಹಾಗು ಎಂಎಲ್ಸಿ ಪಿ.ಎಚ್.ಪೂಜಾರ ಜತೆಗಿದ್ದರು.

ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅಣ್ಣಾಸಾಬ್ ಜೊಲ್ಲೆ, "ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದೇನೆ. ನರೇಂದ್ರ ಮೋದಿ ಅವರು ಮತ್ತೊಮ್ಮೆ ಪ್ರಧಾನಿ ಆಗಬೇಕೆಂಬ ಮತದಾರರು ತೀರ್ಮಾನ ಮಾಡಿದ್ದಾರೆ. ಹೀಗಾಗಿ, ಕ್ಷೇತ್ರದಲ್ಲಿ ಒಳ್ಳೆಯ ವಾತಾವರಣವಿದೆ. ಈ ಬಾರಿ ನಾನು ಹೆಚ್ಚು ಮತಗಳ ಅಂತರದಿಂದ ಗೆಲುವು ಸಾಧಿಸುತ್ತೇನೆ" ಎಂದು ಹೇಳಿದರು.




## ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜ್‌ಕುಮಾರ್ ನಾಮಪತ್ರ ಸಲ್ಲಿಕೆ

ಶಿವಮೊಗ್ಗ: ಶಿವಮೊಗ್ಗ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಬಿ.ವೈ. ರಾಘವೇಂದ್ರ ವಿರುದ್ಧ ಕಾಂಗ್ರೆಸ್‌ನಿಂದ ಗೀತಾ ಶಿವರಾಜ್ ಕುಮಾರ್ ಕಣಕ್ಕಿಳಿದಿದ್ದು, ಸೋಮವಾರ ಏಪ್ರಿಲ್ 15 ರಂದು ನಾಪಪತ್ರ ಸಲ್ಲಿಸಿದ್ದಾರೆ.

ಕಾಂಗ್ರೆಸ್ ಅಭ್ಯರ್ಥಿ ಆಗಿರುವ ಗೀತಾ ಶಿವರಾಜ್ ಕುಮಾರ್ ಅವರು, ನಾಮಪತ್ರ ಸಲ್ಲಿಕೆಗೂ ಮುನ್ನ ಸಿಗಂದೂರು ಚೌಡೇಶ್ವರಿ ದೇಗುಲಕ್ಕೆ ಭೇಟಿ ನೀಡಿ ಬಿ.ಫಾರಂಗೆ ಪೂಜೆ ಸಲ್ಲಿಸಿದರು. ಅಲ್ಲದೆ, ಹಿರಿಯ ಮುಖಂಡ ಕಾಗೋಡು ತಿಮ್ಮಪ್ಪ ಅವರನ್ನು ಭೇಟಿಯಾಗಿ ಅವರ ಆಶೀರ್ವಾದ ಪಡೆದರು.

# ಮಾಜಿ ಸಿಎಂ ಎಚ್‌ಡಿಕೆಗೆ ಸವಾಲು ಹಾಕಿದ ಡಿಸಿಎಂ ಡಿಕೆಶಿ

ಬೆಳಗಾವಿ: ಎಲ್ಲ ಮಹಿಳೆಯರಿಗೆ ಸ್ವಾಭಿಮಾನದ ಪ್ರಶ್ನೆ. ಶಕ್ತಿ ಕೊಟ್ಟಿರುವ ಕಾರ್ಯಕ್ರಮದಿಂದ ದಾರಿ ತಪ್ಪಿದ್ದಾರೆ ಎಂದು ಕುಮಾರಸ್ವಾಮಿ ಹೇಳಿಕೆ ನೀಡಿದ್ದಾರೆ. ಇವರಿಗೆ ತಕ್ಕ ಪಾಠ ಕಲಿಸಲು ಎಲ್ಲರೂ ಪ್ರತಿಯೊಂದು ತಾಲೂಕಿನಲ್ಲಿ ಹೋರಾಟ ಮಾಡಬೇಕು ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಕರೆ ನೀಡಿದರು.

ಕಾಂಗ್ರೆಸ್ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಸರಕಾರದ ಗ್ಯಾರಂಟಿ ಯೋಜನೆಯ ಲಾಭ ಪಡೆಯುತ್ತಿರುವ ಬಿಜೆಪಿಯ ಮೂವ–ರಿಗೆ ಹಿಂಪಡೆಯುವಂತೆ ಕರೆ ಕೊಡಲಿ ನೋಡಣ ಎಂದು ಕುಮಾರಸ್ವಾಮಿಗೆ ಸವಾಲ್ ಹಾಕಿದರು.

ಪ್ರಜಾ ಧ್ವನಿ ಬೆಳಗಾವಿಯಲ್ಲಿ ಯಾತ್ರೆ



ಪ್ರಾರಂಭ ಮಾಡಿ ಚಿಕ್ಕೋಡಿಯಲ್ಲಿ ಗೃಹ ಜ್ಯೋತಿ ಘೋಷಣೆ ಮಾಡಿ ರಾಜ್ಯದ ವಿವಿಧ ಮೂಲೆಯಲ್ಲಿ ಯಾತ್ರೆ ಆರಂಭಿಸಿ ಮೈಸೂರಿನಲ್ಲಿ ಅಂತ್ಯಗೊಳಿಸಿ.

ಬಿಜೆಪಿಯ ಪ್ರಣಾಳಿಕೆಗೆ ಶಕ್ತಿ ಯಾವತ್ತು ಬರುವುದಿಲ್ಲ. ಕೇಂದ್ರದಲ್ಲಿ ಬಿಜೆಪಿ ಸರಕಾರ ಇತ್ತು. ಇನರ ಭಾವನೆ ಬಗ್ಗೆ ಎಂದಿಗೂವ ವಿಚಾರ ಮಾಡಲಿಲ್ಲ. ಕಳೆದ ಚುನಾವಣೆಯ ಪ್ರಣಾಳಿಕೆಯಲ್ಲಿ ಕಪ್ಪು ಹಣ ತಂದು ಎಲ್ಲರ ಖಾತೆಗೆ 15 ಲಕ್ಷ ಹಣ ಹಾಕುವುದಾಗಿ ಹೇಳಿದ್ದರು. ನಿಮಗೆ ಅವಕಾಶ ಇದ್ದಾಗ. ಎಷ್ಟು ಹಣ ಬಂತು. ಜನರ ಖಾತೆಗೆ ಹಣ ಹಾಕಿದರಾ ಎನ್ನುವುದನ್ನು ಪ್ರಧಾನಿ ನರೇಂದ್ರ ಮೋದಿ ಹಾಗೂ ಜೆ.ಪಿ.ನಡ್ಡಾ ಸೇರಿದಂತೆ ಎಲ್ಲ ನಾಯಕರು ಉತ್ತರ ಕೊಡಬೇಕು ಎಂದರು.

ಬಿಜೆಪಿಯವರು ರೈತರ ಆದ–ಾಯ ದ್ವಿಗುಣ ಮಾಡುವುದಾಗಿ ಹೇಳಿದ್ದರು. ಯಾವ ರೈತರ ಆದಾಯ ದ್ವಿಗುಣವಾಗಿದೆ. ಕೇಂದ್ರ ಸರಕಾರ ರೈತ ವಿರೋಧಿ ಕೃಷಿ ಮಸೂದೆ ಜಾರಿ ಮಾಡಿ ಹಿಂಪಡೆದರು.

ನಮ್ಮ ಸರಕಾರ ಬಂದ ಬಳಿಕ ನಾವು ಅದನ್ನು ಹಿಂಪಡೆಯಲು ರಾಜ್ಯ ಸರಕಾರ ಮುಂದಾದಾಗ ಅದಕ್ಕೆ ವಿರೋಧಿಸಿದರು ಎಂದರು.

ಪ್ರತಿ ವರ್ಷ 2 ಕೋಟಿ ಉದ್ಯೋಗ ಕೊಡುವುದಾಗಿ ಘೋಷಿಸಿದ್ದರು. ಎಷ್ಟು ಜನರಿಗೆ ಉದ್ಯೋಗ ಕೊಡಿಸಿದ್ದೀರಿ ಎಂದು ಪ್ರಶ್ನಿಸಿದ ಅವರು, ರಾಜ್ಯದಲ್ಲಿ ವಿಧಾನಸಭಾ ಚುನಾವಣೆಯಲ್ಲಿ ನಾವು ಜನರಿಗೆ ನೀಡಿದ ಭರವಸೆಯ ಹಾಗೆ ಈಡೇರಿಸಿದ್ದೇವೆ.

ಅವರು ನಮಗೆ ಮತ ಹಾಕುತ್ತಾರೆ. ನೀವು ಜನರಿಗೆ ಏನು ಮಾಡಿದ್ದೀರಿ ಎಂದು ಬಿಜೆಪಿಗೆ ಮತಹಾಕಬೇಕು ಎಂದರು.

ಕೊರೊನಾ ಸಂದರ್ಭದಲ್ಲಿ ಕೇಂದ್ರದ ಸಚಿವರಾಗಿದ್ದ ಸುರೇಶ ಅಂಗಡಿ ಅವರು ಮೃತಪಟ್ಟಾಗ ಬೆಳಗಾವಿಯಲ್ಲಿ ಜನರ ದರ್ಶನ ಮಾಡಲು ಅವಕಾಶ ಕೊಡದೆ ಕೆಟ್ಟ ರೀತಿಯಲ್ಲಿ ಅಂತ್ಯಸಂಸ್ಕಾರ ಮಾಡಿದ್ದು ದುರಂತ ಎಂದರು.

ಶಾಸಕರಾದ ಲಕ್ಷ್ಮಣ ಸವದಿ, ಮಹಾಂತೇಶ ಕೌಜಲಗಿ, ರಾಜು ಕಾಗೆ, ಆಸಿಫ್ ಸೇಠ್, ಬಾಬಾಸಾಹೇಬ ಪಾಟೀಲ, ಮಹೇಶ ತಮ್ಮಣ್ಣವರ, ಗಣೇಶ ಹುಕ್ಕೇರಿ, ಅಶೋಕ ಪಟ್ಟಣ್ಣ, ವಿಧಾನ ಪರಿಷತ್ತಿನ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ, ಪ್ರಕಾಶ ಹುಕ್ಕೇರಿ, ಬೆಳಗಾವಿ ಗ್ಯಾರಂಟಿ ಯೋಜನೆ ಪ್ರಾಧಿಕಾರದ ಅಧ್ಯಕ್ಷ ವಿನಯ ನಾವಲಗಟ್ಟಿ, ಬುಡಾ ಅಧ್ಯಕ್ಷ ಲಕ್ಷ್ಮಣ ಚಿಂಗಳೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಡ್ಯಾಮೇಜ್ ಕಂಟ್ರೋಲ್ಗೆ ಮುಂದಾದ ಮಾಜಿ ಸಿಎಂ ಹೆಚ್.ಡಿ. ಕುಮಾರಸ್ವಾಮಿ

ಬೆಂಗಳೂರು: ಮಂಡ್ಯದಲ್ಲಿ 'ಗೋ ಬ್ಯಾಕ್ ಕುಮಾರಸ್ವಾಮಿ ಗ್ಯಾರೆಂಟಿ ಯೋಜನೆಯಿಂದ ಹಳ್ಳಿ ಹೆಣ್ಣುಮಕ್ಕಳು ದಾರಿ ತಪ್ಪುತ್ತಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್ಡಿ ಕುಮಾರಸ್ವಾಮಿ ಪ್ರಚಾರ ಸಭೆಯಲ್ಲಿ ಹೇಳಿದ್ದರು. ಇದು ವಿವಾದಕ್ಕೆ ಕಾರಣವಾಗಿದ್ದು, ಪ್ರತಿ ಪಕ್ಷಗಳಿಗೆ ಅಸ್ತ್ರವಾಗಿ ಪರಿಣಮಿಸಿದೆ. ಹೆಚ್ಡಿ ಕುಮಾರಸ್ವಾಮಿ ಅವರ ಈ ಹೇಳಿಕೆಯಿಂದ ಎನ್ಡಿಎ ಮೈತ್ರಿಕೂಟಕ್ಕೆ ಹೊಡೆತ ಬೀಳುವ ಸಾಧ್ಯತೆ ಹಿನ್ನೆಲೆಯಲ್ಲಿ ಡ್ಯಾಮೇಜ್ ಕಂಟ್ರೋಲ್ಗೆ ಹೆಚ್ಡಿ ಕುಮಾರಸ್ವಾಮಿ ಮುಂದಾಗಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕುಮಾರಸ್ವಾಮಿ ನಾನು ಹೆಣ್ಣುಮಕ್ಕಳನ್ನು ಅವಮಾನಿಸಿಲ್ಲ. ಮಹಿಳೆಯರ ಬದುಕು ಸರಿಪಡಿಸಬೇಕು ಅಂತ ಹೇಳಿದ್ದೇನೆ. ಗ್ಯಾರಂಟಿ ಕೊಟ್ಟು ಮಹಿಳೆಯರಿಗೆ ಅನ್ಯಾಯ ಮಾಡಿದ್ದಾರೆ ಅನ್ನೋದನ್ನ ಹೇಳಿದ್ದೇನೆ. ಆದ್ರೆ ಕಾಂಗ್ರೆಸ್ ನಾಯಕರು ಅವರಿಗೆ ಬೇಕಾದಂತೆ ನನ್ನ ಹೇಳಿಕೆಯನ್ನ ಬಳಸಿಕೊಂಡಿದ್ದಾರೆ. ನನ್ನ ಹೇಳಿಕೆ ದುಖಃಕ್ಕೆ ಒಳಗಾಗುವ ಹಾಗೆ ಮಾಡಿದರೆ ವಿಷಾದ ವ್ಯಕ್ತಪಡಿಸುತ್ತೇನೆ. ನಾನು ದಾರಿ ತಪ್ಪಿದಾಗ ನನ್ನ ಹೆಂಡತಿ ಸರಿ ದಾರಿಗೆ ತಂದಿದ್ದಾರೆ ಎಂದು ನಾನು



ಸದನದಲ್ಲಿ ಹೇಳಿದ್ದೇನೆ. ತಮ್ಮನಿಗೆ ಮತ ಹಾಕಿ ನೀರು ಕೊಡುತ್ತೇನೆ ಎನ್ನುವವರು ಇವಾಗ ನನಗೆ ಬೆದರಿಕೆ ಹಾಕುತ್ತಿದ್ದಾರೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧ ಹರಿಹಾಯ್ದರು.

ಮಹಿಳಾ ತಾಯಂದಿರ ಬಗ್ಗೆ ಕ್ಷಮೆ ಕೇಳಲು ಆಗದ ರೀತಿ ಅಪಮಾನ ಮಾಡಿದ್ದೇನೆ ಅಂತ ಕಾಂಗ್ರೆಸ್ ಅಧ್ಯಕ್ಷರು, ಶಾಸಕರು ತರಾತುರಿಯಲ್ಲಿ ಝೂಮ್ ಮೀಟಿಂಗ್ ಮಾಡಿದ್ದಾರೆ. ಇಂದಿರಾಗಾಂಧಿ ಹತ್ಯೆಯಾದ ಸಮಯದಲ್ಲಿ ದುಃಖಪಟ್ಟಿದ್ದು ಬಿಟ್ಟು ಈಗಲೇ ದುಃಖಪಟ್ಟೆ ಅಂತ ಅಧ್ಯಕ್ಷರು, ಮಹಿಳೆಯರ ಪರ ಕಂಬನಿ ಮಿಡಿದಿದ್ದಾರೆ. ಡಿಕೆ ಶಿವಕುಮಾರ್‌ಗೆ ಕೇಳ್ತೀನಿ, ಕೆಲವು ಹೆಣ್ಣುಮಕ್ಕಳನ್ನ ಕಿಡ್ನಾಪ್ ಮಾಡಿ ಜಮೀನು ಬರೆಸಿಕೊಂಡಾಗ ಇವರಿಗೆ ದುಃಖ ಬಂದಿಲ್ಲ, ಈಗ ದುಃಖ ಬಂದಿದೆ ಎಂದರು.

ಕಾಂಗ್ರೆಸ್ ನೀಡಿರುವ 5 ಗ್ಯಾರಂಟಿ ಪಿಕ್ ಪ್ಯಾಕೇಟ್ ಗ್ಯಾರಂಟಿ. ಕಾಂಗ್ರೆಸ್ ಸಚಿವರು, ನಾಯಕರು, ಮಹಿಳಾ ಘಟಕದವರು ಮಂಡ್ಯದಲ್ಲಿ 'ಗೋ ಬ್ಯಾಕ್ ಕುಮಾರಸ್ವಾಮಿ' ಅಂತ ಮಾಡಿದ್ದಾರೆ .ಮಿಸ್ಟರ್ ಶಿವಕುಮಾರ್ ನಿಮ್ಮ ಉಸ್ತುವಾರಿ ಇದ್ದಾರೆ ಅಲ್ಲವಾ? ಆ ಮನುಷ್ಯ ಏನ್ ಹೇಳಿಕೊಟ್ರು? ಹೇಮಮಾಲಿನಿ ವಿರುದ್ಧ ಸುರ್ಜೇವಾಲಾ ಅವರು ಏನ್ ಹೇಳಿದ್ದರು? ಅದನ್ನ ಕನ್ನಡದಲ್ಲಿ ಓದೋಕೆ ಆಗಲ್ಲ. ಅದೆಲ್ಲ ಮಹಿಳೆಯರಿಗೆ ಗೌರವ ಕೊಡುವ ಹೇಳಿಕೆಗಳಾ? ಎಂದು ಪ್ರಶ್ನಿಸಿದ್ದಾರೆ.

## ಎಚ್.ಡಿ ಕುಮಾರಸ್ವಾಮಿ ದಾರಿ ತಪ್ಪಿದ ಮಗ: ನಟ ಪ್ರಕಾಶ್ ರೈ

ಬೆಂಗಳೂರು: ಹೆಣ್ಣು ಮಕ್ಕಳ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿರುವ ಮಾಜಿ ಸಿಎಂ ಕುಮಾರಸ್ವಾಮಿ ಅವರೇ ದಾರಿ ತಪ್ಪಿದ ಮಗ ಎಂದು ನಟ ಪ್ರಕಾಶ್ ರೈ ವಾಗ್ದಾಳಿ ನಡೆಸಿದ್ದಾರೆ.

ಮಂಡ್ಯದಲ್ಲಿ ಮಾತನಾಡಿರುವ ನಟ ಪ್ರಕಾಶ್ ರೈ ಹೆಣ್ಣು ಮಕ್ಕಳ ಬಗ್ಗೆ ಇಷ್ಟು ಕೀಳು ಮಟ್ಟಕ್ಕೆ ಮಾತನಾಡಲು ಕುಮಾರಸ್ವಾಮಿಗೆ ನಾಚಿಕೆ, ಮಾನ ಮರ್ಯಾದೆ ಇಲ್ಲವೇ"? ಎಂದು ಕಿಡಿಕಾರಿದ್ದಾರೆ.

ಕಳೆದ ಚುನಾವಣೆಯಲ್ಲಿ ಸುಮಲತಾ ಅಂಬ–



ರೀಶ್ ಬಗ್ಗೆ ಕುಮಾರಸ್ವಾಮಿ ಕೆಟ್ಟದಾಗಿ ಮಾತನಾಡಿದ್ದರು.

ಆ ಕಾರಣಕ್ಕೆ, ಮಂಡ್ಯದ ಮಹಿಳೆಯರು ಚುನಾವಣೆಯಲ್ಲಿ ಸೋಲಿಸಿ ಮನೆಗೆ ಕಳಿಸಿದ್ದರು.

ಈ ಬಾರಿಯ ಚುನಾವಣೆಯಲ್ಲೂ ಕುಮಾರಸ್ವಾಮಿ ಅದೇ ಕೆಲಸ ಮಾಡುತ್ತಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ 'ಸರಿಯಾದ ಮಗ ಯಾರ ಎಂಬುವುದನ್ನು ಮಂಡ್ಯದ ಜನರು ತೀರ್ಮಾನಿಸಬೇಕು" ಎಂದು ಹೇಳಿದರು.

## ಐವರು ದುರ್ಮರಣ


ಟಿಪ್ಪರ್ ಟೈರ್ ಬ್ಲಾಸ್ಟ್ ಆದ ಪರಿಣಾಮ ಐವರು ಸ್ಥಳದಲ್ಲಿಯೇ ಸಾವನ್ನಪ್ಪಿರುವ ಘಟನೆ ಬಾಗಲಕೋಟೆ ಜಿಲ್ಲೆಯ ಬೀಳಗಿ ತಾಲ್ಲೂಕಿನ ಹೊನ್ಯಾಳ ಗ್ರಾಮದ ಬಳಿಯ ರಾಷ್ಟ್ರೀಯ ಹೆದ್ದಾರಿ 218 ರಲ್ಲಿ ನಡೆದಿದೆ.

ರವಿವಾರ ರಾತ್ರಿ ಹೊನ್ಯಾಳ ಗ್ರಾಮದಲ್ಲಿ ಟಿಪ್ಪರ್ ನ ಟೈರ್ ಬ್ಲಾಸ್ಟ್ ಆದ ಪರಿಣಾಮ ಟಿಪ್ಪರ್ ಪಾದಾಚಾ–ರಿಗಳ ಮೇಲೆ ಉರುಳಿದ್ದು, ಒಂದೇ ಕುಟುಂಬದ ಐವರು ಸ್ಥಳದಲ್ಲೇ ದುರ್ಮರಣ ಹೊಂದಿದ್ದಾರೆ. ಮೃತರು ಬಾದರದಿನ್ನಿ ಗ್ರಾಮದವರು ಎನ್ನಲಾಗಿದೆ.

ಹೊಲಕ್ಕೆ ಹೋಗಿ ಕೆಲಸ ಮುಗಿಸಿಕೊಂಡು ಬರುವಾಗ ದುರ್ಘಟನೆ ಸಂಭವಿಸಿದ್ದು, ರಸ್ತೆ ಬದಿ ನಡೆದುಕೊಂಡು ಬರುತ್ತಿದ್ದರು. ಆಗ ಗರಸು ತುಂಬಿದ ಟಿಪ್ಪರ್ ನ ಮುಂದಿನ ಟೈರ್ ಬ್ಲಾಸ್ಟ್ ಆಗಿ ನಡೆದುಕೊಂಡು ಹೊರಟಿದ್ದವರ ಮೇಲೆ ಟಿಪ್ಪರ್ ಬಿದ್ದಿದೆ. ಯಂಕಪ್ಪ ಶಿವಪ್ಪ ತೋಳಮಟ್ಟಿ (70), ಯಲ್ಲವ್ವ ಯಂಕಪ್ಪ ತೋಳಮಟ್ಟಿ(ಪತ್ನಿ) (60), ಪುಂಡಲೀಕ್ ಯಂಕಪ್ಪ ತೋಳಮಟ್ಟಿ(ಮಗ) (35), ಅಶೋಕ ನಿಂಗಪ್ಪ ಬಮ್ಮಣ್ಣವರ(ಅಳಿಯ– ಮಗಳ ಗಂಡ) (50) ನಾಗವ್ವ ಅಶೋಕ ಬಮ್ಮಣ್ಣವರ( ಯಂಕಪ್ಪ ಅವರ ಮಗಳು) (45) ಮೃತರು.

ಸ್ಥಳಕ್ಕೆ ಬೀಳಗಿ ಪೊಲೀಸರು ದೌಡಾಯಿಸಿ ಪರಿಶೀಲನೆ ನಡೆಸಿದ್ದಾರೆ. ಮಾಹಿತಿ ತಿಳಿದು ಘಟನಾ ಸ್ಥಳಕ್ಕೆ ಬಾಗಲಕೋಟೆ ಎಸ್ ಪಿ ಅಮರನಾಥ್ ರೆಡ್ಡಿ ಭೇಟಿ ನೀಡಿದ್ದಾರೆ.

## ದಾಖಲೆಗಳಿಲ್ಲದೇ ಸಾಗಿಸುತ್ತಿದ್ದ 2.90 ಕೋಟಿ ರೂ. ಹಣ ಜಪ್ತಿ



ಬೆಂಗಳೂರು: ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಹೆಬ್ಬಗೋಡಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದಾಖಲೆಗಳಿಲ್ಲದೇ ಕಪ್ಪು ಬ್ಯಾಗ್‌ನಲ್ಲಿ ಸಾಗಿಸುತ್ತಿದ್ದ 2.90 ಕೋಟಿ ರೂ. ಹಣವನ್ನು ಚುನಾವಣಾ ಅಧಿಕಾರಿಗಳು ಹಾಗೂ ಪೊಲೀಸರು ಜಪ್ತಿ ಮಾಡಿಕೊಂಡಿದ್ದಾರೆ.

ಇಡೀ ದೇಶದಲ್ಲಿ ಲೋಕಸಭಾ ಚುನಾವಣೆ ನೀತಿ ಸಂಹಿತೆ ಜಾ–ರಿಯಾದಾಗಿನಿಂದ ಬರೋಬ್ಬರಿ 4,500 ಕೋಟಿ ರೂ.ಗಿಂತ ಅಧಿಕ ಕಪ್ಪು ಹಣವನ್ನು ಜಪ್ತಿ ಮಾಡಲಾಗಿದೆ ಎಂದು ಕೇಂದ್ರ ಚುನಾವಣಾ ಆಯೋಗ ಮಾಹಿತಿ ನೀಡಿದೆ.

ಇದರ ಬೆನ್ನಲ್ಲಿಯೇ ಬೊಮ್ಮಸಂದ್ರ ಇಂಡಸ್ಟ್ರೀಯಲ್ ಏರಿಯಾ ಚುನಾವಣೆ ಚೆಕ್ ಪೋಸ್ಟ್‌ನಲ್ಲಿ ಯಾವುದೇ ದಾಖಲೆಗಳಿಲ್ಲದೇ ಟೆಂಪೋ ಮಾದರಿಯ ವಾಹನದಲ್ಲಿ ಸಾಗಿಸುತ್ತಿದ್ದ 2.90 ಕೋಟಿ ರೂ. ನಗದು ಹಣವನ್ನು ವಶಕ್ಕೆ ಪಡೆಯಲಾಗಿದೆ.

ಸಿ.ಎಮ್.ಎಸ್ ಏಜೆನ್ಸಿಗೆ ಸೇರಿದ ವಾಹನದಲ್ಲಿ ಹಣವನ್ನು ಸಾಗಾಟ ಮಾಡಲಾಗುತ್ತಿತ್ತು.

ಬೊಮ್ಮಸಂದ್ರದ ಬಳಿಯ ಚೆಕ್‌ಪೋಸ್ಟ್‌ನಲ್ಲಿ ತಪಾಸಣೆ ಮಾಡಿದ ವೇಳೆ ನಾಲ್ಕು ಬೃಹತ್ ಬ್ಯಾಗ್‌ಗಳಲ್ಲಿ ಕಂತೆ ಕಂತೆ ಹಣವನ್ನು ಸಾಗಾಟ ಮಾಡುತ್ತಿರುವುದು ಪತ್ತೆಯಾಗಿದೆ.

ಕೂಡಲೇ ಚೆಕ್‌ಪೋಸ್ಟ್ ಸಿಬ್ಬಂದಿ ಮೇಲಧಿಕಾರಿಗಳಿಗೆ ಮಾಹಿತಿ ರವಾನಿಸಿ ಹಣವನ್ನು ಸೀಜ್ ಮಾಡಿದ್ದಾರೆ. ಒಟ್ಟು 2.90 ಕೋಟಿ ರೂ. ಹಣವನ್ನು ಸಾಗಾಟ ಮಾಡುತ್ತಿದ್ದರೂ ಅದಕ್ಕೆ ದಾಖಲೆಗಳನ್ನು ಮಾತ್ರ ಇಟ್ಟುಕೊಂಡಿರಲಿಲ್ಲ. ಆದ್ದರಿಂದ ಚುನಾವಣಾಧಿಕಾರಿಗಳು ಹಾಗೂ ಪೊಲೀಸರ ತಂಡವು ದಾಖಲೆಯಿಲ್ಲದ ಹಣವನ್ನು ಹಾಗೂ ವಾಹನ ಚಾಲಕರನ್ನು ವಶಕ್ಕೆ ಪಡೆದಿದ್ದಾರೆ. ವಾಹನವನ್ನು ಹೆಬ್ಬಗೋಡಿ ಪೊಲೀಸ್ ಠಾಣೆಗೆ ತರಲಾಗಿದೆ.

## ಪ್ರಹ್ಲಾದ ಜೋಶಿ ವಿರುದ್ಧ ಸ್ಪರ್ಧಿಸುವ ದುಸ್ಸಾಹಸಕ್ಕೆ ದಿಂಗಾಲೇಶ್ವರ ಶ್ರೀ ಮುಂದಾಗಬಾರದು: ಯಡಿಯೂರಪ್ಪ



ಹುಬ್ಬಳ್ಳಿ: ಧಾರವಾಡ-ಹುಬ್ಬಳ್ಳಿ ಕ್ಷೇತ್ರದ ಜನತೆ ಪ್ರಹ್ಲಾದ ಜೋಶಿ ಪರವಾಗಿದ್ದಾರೆ. ಅವರ ವಿರುದ್ಧ ಸ್ಪರ್ಧಿಸುವ ದುಸ್ಸಾಹಸಕ್ಕೆ ಫಕೀರ ದಿಂಗಾಲೇಶ್ವರ ಸ್ವಾಮೀಜಿ ಕೈ ಹಾಕಬಾರದು ಎಂದು ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ ಎಸ್ ಯಡಿಯೂರಪ್ಪ ಹೇಳಿದ್ದಾರೆ.

ಹುಬ್ಬಳ್ಳಿಯ ವಿಮಾನ ನಿಲ್ದಾಣದಲ್ಲಿ ಸೋಮವಾರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಧಾರವಾಡ ಲೋಕಸಭಾ ಕ್ಷೇತ್ರದಿಂದ ಕಣಕ್ಕಿಳಿಯದಂತೆ ಫಕೀರ ದಿಂಗಾಲೇಶ್ವರ ಸ್ವಾಮೀಜಿ ಅವರಿಗೆ ಮತ್ತೊಮ್ಮೆ ಮನವಿ ಮಾಡುತ್ತೇನೆ. ಯಾವುದೇ ಕಾರಣಕ್ಕೂ ಸ್ಪರ್ಧೆ ಮಾಡಬಾರದೆಂದು ಅವರನ್ನು ಕೋರುವೆ. ಮುಂದೆ ಏನು ತೀರ್ಮಾನ ಕೈಗೊಳ್ಳುತ್ತಾರೆ ನೋಡೋಣ ಎಂದರು.

ರಾಜ್ಯದಲ್ಲಿ ಬಿಜೆಪಿ, ಪ್ರಧಾನಿ ಮೋದಿ ಪರವಾದ ಅಲೆ ಇದೆ. ಈ ಕ್ಷೇತ್ರದಲ್ಲಿ ಜೋಶಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳು ಮನೆ ಮನೆಗೆ ಗೊತ್ತಿದೆ. ಅವರೊಬ್ಬ ಪ್ರಬುದ್ಧ ರಾಜಕಾರಣಿಯಾಗಿದ್ದಾರೆ. ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ. ಅಭಿವೃದ್ಧಿ ಕಾರ್ಯಗಳೇ ಅವರ ಗೆಲುವಿಗೆ ಶ್ರೀರಕ್ಷೆಯಾಗಲಿವೆ ಎಂದರು.

ಪ್ರಹ್ಲಾದ್ ಜೋಶಿ ವಿರುದ್ಧ ದಿಂಗಾಲೇಶ್ವರ ಸ್ವಾಮೀಜಿ ಸ್ಪರ್ಧೆ ಮಾಡುವ ದುಸ್ಸಾಹಸಕ್ಕೆ ಕೈ ಹಾಕಿದ್ದಾರೆ. ಸ್ವಾಮೀಜಿ ಅವರಿಗೆ ಮತ್ತೊಮ್ಮೆ ವಿನಂತಿ ಮಾಡುತ್ತೇನೆ. ತಮ್ಮ ನಿರ್ಧಾರದಿಂದ ಹಿಂದೆ ಸರಿಯಬೇಕು. ಈ ಕುರಿತು ಈಗಾಗಲೇ ಅವರೊಂದಿಗೆ ಮಾತನಾಡಿದ್ದೇನೆ. ಇನ್ನೊಮ್ಮೆ ಫೋನ್ ಕರೆ ಮೂಲಕ ಅವರನ್ನು ಮನವೊಲಿಸುವ ಕೆಲಸ ಮಾಡುವೆ ಎಂದು ತಿಳಿಸಿದರು.

## ನನ್ನ ಪೂರ್ವಜರಂತೆ ನಾನು ಕೂಡ ಜನರಿಗಾಗಿ ಶ್ರಮಸುತ್ತೇನೆ: ಯದುವೀರ್ ಕೃಷ್ಣದತ್ತ ಒಡೆಯರ್



ಮೈಸೂರು: ನನ್ನ ಪೂರ್ವಜರಂತೆ ನಾನು ಕೂಡ ಜನರಿಗಾಗಿ ಶ್ರಮಸುತ್ತೇನೆಂದು ಮೈಸೂರು ಕ್ಷೇತ್ರದ ಬಿಜೆಪಿ-ಜೆಡಿಎಸ್ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಭಾನುವಾರ ಹೇಳಿದರು.

ಮಹಾರಾಜ ಮೈದಾನದಲ್ಲಿ ಬಿಜೆಪಿ ಮತ್ತು ಜೆಡಿ-ಎಸ್ ಭಾನುವಾರ ಆಯೋಜಿಸಿದ್ದ ವಿಜಯ ಸಂಕಲ್ಪ ಸಮಾವೇಶದಲ್ಲಿ ಮಾತನಾಡಿದ ಅವರು, ಬಿಜೆಪಿ ಅಭ್ಯರ್ಥಿಗೆ ಜನರ ಮಧ್ಯೆ ಇದ್ದು ಗೊತ್ತಿಲ್ಲ ಎಬ ಕಾಂಗ್ರೆಸ್ ನಾಯಕರ ಹೇಳಿಕೆಗೆ ಪರೋಕ್ಷವಾಗಿ ಟಾಂಗ್ ನೀಡಿದರು.

ನನ್ನ ಪೂರ್ವಜರು ಅರಮನೆಯಲ್ಲಿ ಆಡಳಿತ ನಡೆಸುತ್ತಿದ್ದಾಗ ಜನರ ಕಲ್ಯಾಣಕ್ಕಾಗಿ ತಮ್ಮನ್ನು ತಾವು ಅರ್ಪಿಸಿಕೊಂಡಿದ್ದರು. ನಾನು ಅರಮನೆಯಲ್ಲಿ ಹುಟ್ಟಿ ಬೆಳೆದರೂ ಪ್ರಜಾಸತ್ತಾತ್ಮಕ ಚೌಕಟ್ಟಿನಲ್ಲಿ ಜನರೊಂದಿಗೆ ನಿಂತು ಅವರ ಶ್ರೇಯೋಭಿವೃದ್ಧಿಗಾಗಿ ಪ್ರತಿಪಾದಿಸುವ ಸಂಕಲ್ಪ ಮಾಡಿದ್ದೇನೆ.

ಚಾಮುಂಡೇಶ್ವರಿ ದೇವಿಯ ರಥವನ್ನು ಒಡೆಯರ್‌ಗಳು ಎಳೆದಂತೆಯೇ, ಈಗ ಪ್ರಧಾನಿ ಮೋದಿಯವರೊಂದಿಗೆ ಭಾರತ ಮಾತೆಯ ರಥವನ್ನು ಮುನ್ನಡೆಸುತ್ತೇನೆ. ಇದು ನಮ್ಮ ಕರ್ತವ್ಯವಾಗಿದೆ ಎಂದು ಹೇಳಿದರು.

ಇದೇ ವೇಳೆ ಮೋದಿಯವರ 10 ವರ್ಷಗಳ ಆಡಳಿತಾವಧಿಯಲ್ಲಿ ಕೈಗೊಂಡ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳನ್ನು ಉಲ್ಲೇಖಿಸಿದರು.

ಪ್ರಧಾನಿ ಮೋದಿಯವರು ಆಧುನಿಕ ಯೋಗವನ್ನು ಜಗತ್ತಿಗೆ ಪರಿಚಯಿಸಿದರು, ಮೋದಿಯವರ ಈ ಪ್ರಯತ್ನ ಯೋಗಕ್ಕೆ ಅಂತರಾಷ್ಟ್ರೀಯ ಮನ್ನಣೆಯನ್ನು ಗಳಿಸಿವೆ, ಭಾರತದ ಸಾಂಸ್ಕೃತಿ-ಕ ಪರಂಪರೆಯನ್ನು ಕಾಪಾಡಿವೆ ಎಂದು ಪ್ರತಿಪಾದಿಸಿದರು.



## ಡಯಟ್: ಪ್ರಶಿಕ್ಷಣಾರ್ಥಿಗಳಿಂದ ಮತದಾನ ಜಾಗೃತಿ

ಬಳ್ಳಾರಿ: ನಗರದ ರೇಡಿಯೋ ಪಾರ್ಕ್ನ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ವತಿಯಿಂದ ಸೋಮವಾರ ಮತದಾನ ಜಾಗೃತಿ ಕಾರ್ಯಕ್ರಮ ನಡೆಯಿತು.

ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ಹನುಮಕ್ಕ ಅವರ ನೇತೃತ್ವದಲ್ಲಿ ಸಂಸ್ಥೆಯ ಉಪನ್ಯಾಸಕರು, ಪ್ರಶಿಕ್ಷಣಾರ್ಥಿಗಳಿಂದ ರೇಡಿಯೋ ಪಾರ್ಕ, ಕೌಲ್ಬಜಾರ್ ಸೇರಿದಂತೆ ಪ್ರಮುಖ ಬೀದಿಗಳಲ್ಲಿ ಮತದಾನ ಜಾಗೃತಿಯ ಫಲಕ ಹಿಡಿದು, ಮೇ 07 ರಂದು ನಡೆಯುವ ಮತದಾನ ದಿನದಂದು ತಪ್ಪದೇ ಮತದಾನ ಮಾಡುವಂತೆ ಅರಿವು ಮೂಡಿಸಲಾಯಿತು.

ಈ ವೇಳೆ ಡಯಟ್ನ ಹಿರಿಯ ಉಪನ್ಯಾಸಕರಾದ ವಿಜಯ ರಂಗಾರೆಡ್ಡಿ, ಜೆ.ಎಂ.ತಿಪ್ಪೇಸ್ವಾಮಿ, ರಾಜಶೇಖರ್ ಸೇರಿದಂತೆ ಪ್ರಶಿಕ್ಷಣಾರ್ಥಿಗಳು ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

## ವ್ಯಕ್ತಿ ಕಾಣೆ: ಪ್ರಕರಣ ದಾಖಲು



ಬಳ್ಳಾರಿ: ಕಂಪ್ಲಿ ತಾಲ್ಲೂಕಿನ ಶ್ರೀ ರಾಮರಂಗಾಪುರ ಗ್ರಾಮದ ಮಂಜುನಾಥ. ಆರ್ ಎನ್ನುವ 30 ವರ್ಷ ವ್ಯಕ್ತಿ 2023 ಮೇ 26 ರಂದು ಕಾಣೆಯಾಗಿರುವ ಕುರಿತು ಕುಡತಿನಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಾಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಉಪ ನಿರೀಕ್ಷಕರು ಅವರು ಮನವಿ ಮಾಡಿದ್ದಾರೆ.

ಕಾಣೆಯಾದ ಯುವಕನ ಚಹರೆ:

ಎತ್ತರ 5 ಅಡಿ 6 ಇಂಚು, ಕೋಲು ಮುಖ, ಗೋಧಿ ಮೈಬಣ್ಣ, ದೃಢ ಮೈಕಟ್ಟು ಹೊಂದಿದ್ದು, ಬೆಕ್ಕಿನ ಕಣ್ಣು, ತಲೆಯಲ್ಲಿ ಕಪ್ಪು ಕೂದಲು ಇರುತ್ತದೆ. ವ್ಯಕ್ತಿ ಕಾಣೆಯಾದ ಸಂದರ್ಭದಲ್ಲಿ ಕಪ್ಪು ಮತ್ತು ಕೆಂಪು ಬಣ್ಣದ ಚೆಕ್ಸುಳ್ಳ ತುಂಬು ತೋಳಿನ ಶರ್ಟ, ಗೋಧಿ ಬಣ್ಣದ ಪ್ಯಾಂಟ್ ಧರಿಸಿದ್ದು, ಕನ್ನಡ ಮತ್ತು ತೆಲುಗು ಭಾಷೆ ಮಾತಾನಾಡುತ್ತಾನೆ.

ಈ ಮೇಲ್ಕಂಡ ಚಹರೆ ಗುರುತುಳ್ಳ ವ್ಯಕ್ತಿ ಬಗ್ಗೆ ಸುಳಿವು ಸಿಕ್ಕಲ್ಲಿ ಕುಡುತಿನಿ ಪೊಲೀಸ್ ಠಾಣೆಯ ಪಿಎಸ್ಐ ಮೊ.9480803078 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಾಖಲೆ ಇಲ್ಲದ 10 ಲಕ್ಷಕ್ಕೂ ಅಧಿಕ ಹಣ ಜಪ್ತಿ



ಬಾಗಲಕೋಟೆ: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಚುನಾವಣಾ ಅಕ್ರಮಗಳ ಮೇಲೆ ಪೊಲೀಸರು, ಚುನಾವಣಾ ಅಧಿಕಾ-ರಿಗಳು ತೀವ್ರ ನಿಗಾ ಇಟ್ಟಿದ್ದು, ದಾಖಲೆ ಇಲ್ಲದೇ ಸಾಗಿಸುತ್ತಿದ್ದ 10 ಲಕ್ಷಕ್ಕೂ ಅಧಿಕ ಹಣವನ್ನು ವಶಕ್ಕೆ ಪಡೆದಿರುವ ಘಟನೆ ಬಾಗಲಕೋಟೆಯಲ್ಲಿ ನಡೆದಿದೆ.

ಬಾಗಲಕೋಟೆಯ ನಾಯನೇಗಲಿ ಚೆಕ್ ಪೋಸ್ಟ್ ನಲ್ಲಿ ವಾಹನವನ್ನು ತಪಾಸಣೆ ನಡೆಸುತ್ತಿದ್ದ ವೇಳೆ ಮಹಾರಾಷ್ಟ್ರ ಹಾಗೂ ಕರ್ನಾಟಕ ಮೂಲದ ಎರಡು ವಾಹನದಲ್ಲಿ 10, 77,200 ರೂಪಾಯಿ ನಗದು ಹಣ ಪತ್ತೆಯಾಗಿದೆ.

ಯಾವುದೇ ಸೂಕ್ತ ದಾಖಲೆಗಳಿಲ್ಲದ ಹಿನ್ನೆಲೆಯಲ್ಲಿ ಹಣ ಹಾಗೂ ವಾಹನಗಳನ್ನು ವಶಕ್ಕೆ ಪಡೆಯಲಾಗಿದೆ. ಪೊಲೀಸರು ಹಾಗೂ ಫ್ಲೈಯಿಂಗ್ ಸ್ಕ್ವಾಡ್ ಜಂಟಿ ಕಾರ್ಯಾಚರಣೆ ವೇಲೆ ಈ ಹಣ ಪತ್ತೆಯಾಗಿದೆ ಎಂದು ತಿಳಿದುಬಂದಿದೆ.

## ಬೆಳಗಾವಿ ಪೊಲೀಸರ ಕಾರ್ಯಾಚರಣೆ: ಆರೋಪಿಗಳ ಬಂಧನ

ಬೆಳಗಾವಿ: ಪೊಲೀಸ್ ಕಮೀಷನರ್ ವ್ಯಾಪ್ತಿಯ ವಿವಿಧ ಪೊಲೀಸ್ ಠಾಣಾ ಸಿಬ್ಬಂದಿಗಳು ದಾಳಿ ಮಾಡಿ, ಮಟಕಾ, ಹಾಗೂ ಅಕ್ರಮ ಮದ್ಯ ಮಾರಾಟಗಾರರ ಹೆಡೆಮುರಿ ಕಟ್ಟಿದ್ದಾರೆ.

ಏ.12 ರಂದು ಖಚಿತ ಮಾಹಿತಿ ಮೇರೆಗೆ ನಗರದ ಗಾಂಧಿ ನಗರದ ರೇಲ್ವೇ ಹಳಿಯ ಪಕ್ಕದ ಸಾರ್ವಜನಿಕ ಸ್ಥಳದಲ್ಲಿ ಮಾಳಮಾರುತಿ ಪಿಐ ಮತ್ತು ತಂಡ ದಾಳಿ ಮಾಡಿ, ಅಕ್ರಮವಾಗಿ ಮಟಕಾ ಮಾರಾಟ ಮಾಡುತ್ತಿದ್ದ ಖದೀಮ ರಾಜಾಸಾಬ ನಧಾಫನನ್ನು ವಶಕ್ಕೆ ಪಡೆದುಕೊಂಡು 1950 ರೂ. ಹಣ ಹಾಗೂ ಸಾಮಗ್ರಿಗಳನ್ನು ವಶಕ್ಕೆ ಪಡೆದು, ಮಾಳಮಾರುತಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಏ.13 ರಂದು ಬೆಳಗಾವಿ ನಗರದ ಜೈತುನ ಮಾಳ ಸಮೀಪದ ಜೋಟಪಟ್ಟಿ ಹತ್ತಿರ ಸಾರ್ವಜನಿಕರ ಸ್ಥಳದಲ್ಲಿ ಮಟಕಾ ಮಾರಾಟ ಮಾಡಿತ್ತಿದ್ದವನನ್ನು ಬೆಳಗಾವಿ ಗ್ರಾಮೀಣ ಪಿಐ ಮತ್ತು ಅವರ ತಂಡ ದಾಳಿ ಮಾಡಿ, ಬಂಧಿಸಿದ್ದಾರೆ. ಶಿವಪ್ಪ ಮಂಜಾಳಕರ ಹಾಗೂ ರಾಜು ಬಸವಣ್ಣಿ ಮಂಜಾಳಕರ ಬಂಧಿತರು. ಬಂಧಿತರಿಂದ 2260 ರೂ. ಹಣ ಹಾಗೂ ಸಾಮಗ್ರಿಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಲಾಗಿದೆ.

**ಎಪಿಎಂಸಿ ಪೊಲೀಸ್‌ರ ಕಾರ್ಯಾಚರಣೆ**

ಏ.14 ರಂದು ಬೆಳಗಾವಿಯ ಸದಾಶಿವ ನಗರದ ಕಾರ್ಪೋರೇಶನ್ ಕಾಂಪ್ಲೆಕ್ಸ್ ಹತ್ತಿರ ಸಾರ್ವಜನಿಕರ ಸ್ಥಳದಲ್ಲಿ ಅಕ್ರಮ ಸರಾಯಿ ಮಾರುತ್ತಿದ್ದವನ್ನನ್ನು ಎಪಿಎಂಸಿ ಪಿಐ ಮತ್ತು ಅವರ ತಂಡ ದಾಳಿ ಮಾಡಿ ವಶಕ್ಕೆ ಪಡೆದಿದ್ದಾರೆ. ಲಗಮಾ ಯಲ್ಲಪ್ಪ ನಾಯಿಕ ಎಂಬಾತನನ್ನು ವಶಕ್ಕೆ ಪಡೆದು. 2500 ಮೌಲ್ಯದ ವಿವಿಧ ಟೆಟ್ರಾ ಪ್ಯಾಕೇಟ್‌ಗಳನ್ನು ಜಪ್ತಪಡಿಸಿಕೊಂಡು ಎಪಿಎಂಸಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ, ತನಿಖೆ ಮುಂದುವರೆಸಲಾಗಿದೆ. ಈ ದಾಳಿಯಲ್ಲಿ ಪಾಲ್ಗೊಂಡ ಪಿಐ, ಮತ್ತು ಸಿಬ್ಬಂದಿಯವರ ಕಾರ್ಯವನ್ನು ಪೊಲೀಸ್ ಆಯುಕ್ತರು, ಡಿಸಿಪಿ (ಕಾ&ಸು), ಡಿಸಿಪಿ (ಅ&ಸಂ), ಬೆಳಗಾವಿ ನಗರ ರವರು ಶ್ಲಾಘಿಸಿದ್ದಾರೆ.

## ಧಾರವಾಡ ಲೋಕಸಭೆ ಸಾರ್ವತ್ರಿಕ ಚುನಾವಣೆ; ಸೋಮವಾರ ಐದು ಅಭ್ಯರ್ಥಿಗಳಿಂದ 11 ನಾಮಪತ್ರ ಸಲ್ಲಿಕೆ: ಚುನಾವಣಾಧಿಕಾರಿ ದಿವ್ಯ ಪ್ರಭು

ಧಾರವಾಡ: ಲೋಕಸಭಾ ಮತಕ್ಷತ್ರಕ್ಕೆ ಸೋಮವಾರ (ಏ.15) ಐದು ಜನ ಅಭ್ಯರ್ಥಿಗಳಿಂದ 11 ನಾಮಪತ್ರಗಳು ಸಲ್ಲಿಕೆ ಆಗಿವೆ ಎಂದು ಚುನಾವಣಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಷ್ಟ್ರೀಯ ಜನ ಸಂಭಾವನಾ ಸಮಿತಿ ಪಕ್ಷದಿಂದ ನಾಗರಾಜ ಶ್ರೀಧರ ಶೇಟ (4 ಪ್ರತಿಗಳಲ್ಲಿ), ಪಕ್ಷೇತರ ಅಭ್ಯರ್ಥಿಯಾಗಿ ರಾಜಶೇಖರಯ್ಯ ವಿ.ಕಂತಿಮಠ, ಬಹುಜನ ಸಮಾಜ ಪಕ್ಷದಿಂದ ಶೋಭಾ ಬಳ್ಳಾರಿ, ಭಾರತೀಯ ಜನತಾ ಪಕ್ಷದಿಂದ ಪ್ರಲ್ಹಾದ ಜೋಶಿ (4 ಪ್ರತಿಗಳಲ್ಲಿ) ಹಾಗೂ ಉತ್ತಮ ಪ್ರಜಾಕೀಯ ಪಕ್ಷದ ಅಭ್ಯರ್ಥಿಯಾಗಿ ಬಸವಲಿಂಗಪ್ಪ ಈ.ಬುಗಡಿ ಅವರು ನಾಮಪತ್ರ ಸಲ್ಲಿಸಿದ್ದಾರೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಗದೀಶ್ ಶೆಟ್ಟರ್‌ರಿಂದ ಮತಯಾಚನೆ



ಬೈಲಹೊಂಗಲ: ಲೋಕಸಭಾ ಚುನಾವಣೆ ಅಂಗವಾಗಿ ಬೈಲಹೊಂಗಲ ಮತಕ್ಷೇತ್ರದ ಕೆಂಗಾನೂರ ಪೇಟೆ ಓಣಿಯ ಗ್ರಾಮದೇವಿ ದೇವಸ್ಥಾನದ ಬಳಿ ಕೆಂಗಾನೂರ , ಅರವಳ್ಳಿ, ಜಾಲಿಕೊಪ್ಪ ಹಾಗೂ ಲಿಂಗದಳ್ಳಿ ಪಕ್ಷದ ಪ್ರಮುಖರು ಹಾಗೂ ಗುರುಹಿರಿಯರೊಂದಿಗೆ ಪ್ರಚಾರ ಸಭೆ ನಡೆಸಿ, ಜಗದೀಶ್ ಶೆಟ್ಟರ್ ಅವರಿಂದ ಮತಯಾಚನೆ ನಡೆಸಲಾಯಿತು.

ಜಾಗತಿಕ ನಾಯಕರು ಹಾಗೂ ಮಾನ್ಯ ಪ್ರಧಾನಮಂತ್ರಿಗಳಾದ ಶ್ರೀ ನರೇಂದ್ರ ಮೋದಿಜೀ ಅವರು ದೇಶದ ಸುರಕ್ಷತೆ ಹಾಗೂ ರೈತರ ಕಲ್ಯಾಣಕ್ಕಾಗಿ ತೆಗೆದುಕೊಂಡ ದಿಟ್ಟ ಕ್ರಮಗಳ ಕುರಿತು ಮಾತನಾಡಿ, ಭಾರತೀಯ ಜನತಾ ಪಕ್ಷವನ್ನು ಬೆಂಬಲಿಸುವಂತೆ ಮನವಿ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾಜಿ ವಿಧಾನಪರಿಷತ್ ಸದಸ್ಯರಾದ ಶ್ರೀ ಮಹಾಂತೇಶ ಕವಟಗಿಮಠ, ಮಾಜಿ ಶಾಸಕರಾದ ಶ್ರೀ ಜಗದೀಶ ಮೆಟಗುಡ್, ಡಾ. ವಿ.ಐ. ಪಾಟೀಲ, ಮಂಡಲ ಅಧ್ಯಕ್ಷರಾದ ಶ್ರೀ ಗುರುಪಾದ ಕಳ್ಳಿ, ಪ್ರಮುಖರಾದ ಶ್ರೀ ಶಂಕರ ಮಾಡಲಗಿ, ಶ್ರೀ ಯಲ್ಲಪ್ಪ ಹೂಲನಗನವರ, ಶ್ರೀ ಚಂದ್ರಗೌಡ ಪಾಟೀಲ, ಶ್ರೀ ಮಲ್ಲಪ್ಪ ನಂದ್ಯಪ್ಪನವರ, ಶ್ರೀ ಪುಂಡಲೀಕ ಗಾಣಗೇರ ಹಾಗೂ ಗುರುಹಿರಿಯರು ಉಪಸ್ಥಿತರಿದ್ದರು.

## ಮತ ಜಾಗ್ರತಿಗೆ ಚಿತ್ರಕಲಾ ಸ್ಪರ್ಧೆ



ಧಾರವಾಡ: ಮತದಾರರ ಜಾಗೃತಿಗಾಗಿ ಹೊಸ ಹೊಸ ಕಾರ್ಯಕ್ರಮಗಳನ್ನು ರೂಪಿಸುತ್ತಿರುವ ಜಿಲ್ಲಾ ಸ್ವೀಪ್ ಸಮಿತಿ ಸೋಮವಾರ ಧಾರವಾಡದ ಪ್ರಸಿದ್ಧ ಕಿತ್ತೂರ ರಾಣಿ ಚೆನ್ನಮ್ಮ ಉದ್ಯಾನವನದಲ್ಲಿ 18ರಿಂದ 60 ವರ್ಷದೊಳಗಿನ ಮತದಾರ-ರಿಗೆ ಮುಕ್ತ ಚಿತ್ರಕಲಾ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಯಿತ್ತು.

ಸ್ಪರ್ಧೆಯಲ್ಲಿ ಸುಮಾರು 400 ಯುವ ಮತದಾರರು, ಕಾಲೇಜು ವಿದ್ಯಾರ್ಥಿಗಳು ಪಾಲ್ಗೊಂಡು ವೈವಿಧ್ಯಮ ಚಿತ್ರಗಳನ್ನು ಬಿಡಿಸಿದರು.

ಜಿಲ್ಲಾ ಪಂಚಾಯತ ಸಿಇಓ ಹಾಗೂ ಸ್ವೀಪ್ ನೋಡಲ್ ಅಧಿಕಾರಿ ಸ್ವರೂಪ ಟಿ.ಕೆ. ವಿವಿಧ ಚಿತ್ರಗಳನ್ನು ವೀಕ್ಷಿಸಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಅವರು ಚಿತ್ರಕಲೆ ಮೂಲಕ ವಿಭಿನ್ನವಾಗಿ ಮತದಾರರ ಸಂದೇಶ ಸಾರುವ ಆಯ್ದ ಅತ್ಯುತ್ತಮ ಚಿತ್ರಗಳಿಗೆ ಬಹುಮಾನ ನೀಡಲಾಗುವುದೆಂದರು.

ಮೇ 7 ಕ್ಕೆ ಎಲ್ಲರೂ ಸಹ ತಪ್ಪದೇ ಮತ ಚಲಾಯಿಸುವಂತೆ ಹಾಗೂ ಸುತ್ತಮುತ್ತಲಿನ ಎಲ್ಲರಿಗೂ ಪ್ರೇ-ರಿಪಿಸುವಂತೆ ತಿಳಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳರ ಹಾಗೂ ಇತರರು ಉಪಸ್ಥಿತರಿದ್ದರು.

## ವಿದೇಶಗಳಲ್ಲಿ ಭಾರತೀಯ ವಿದ್ಯಾರ್ಥಿಗಳ ಸಾವು ಸಂಖ್ಯೆ ಹೆಚ್ಚಳ ಆತಂಕಕಾರಿ: ಜೈಶಂಕರ್



ಬೆಂಗಳೂರು: ವಿದೇಶಗಳಲ್ಲಿ ಭಾರತೀಯ ವಿದ್ಯಾರ್ಥಿಗಳ ಸಾವು ಸಂಖ್ಯೆ ಹೆಚ್ಚಳ ಆತಂಕಕಾರಿ ಎಂದು ವಿದೇಶಾಂಗ ಸಚಿವ ಜೈಶಂಕರ್ ಹೇಳಿದ್ದಾರೆ. ಆ ಪ್ರಕರಣಗಳಿಗೆ ಸಂಬಂಧವಿಲ್ಲದೇ ಇದ್ದರೂ ಸಹ ಘಟನೆಗಳು ಸರ್ಕಾರಕ್ಕೆ ಖಂಡಿತವಾಗಿಯೂ ದೊಡ್ಡ ಆತಂಕವಾಗಿ ಮಾರ್ಪಟ್ಟಿದೆ ಎಂದು ಜೈಶಂಕರ್ ಹೇಳಿದ್ದಾರೆ.

ಕೆಲವು ವಿದ್ಯಾರ್ಥಿಗಳ ಹತ್ಯೆಗಳು ವೈಯಕ್ತಿಕ ವಿಷಯಗಳಿಗಾಗಿ ನಡೆಯುತ್ತಿದೆ. ಇನ್ನು ಕೆಲವರು ಆಕಸ್ಮಿಕ ಘಟನೆಗಳ ಬಲಿಪಶುಗಳಾಗಿರಬಹುದು ಎಂದು ಜೈಶಂಕರ್ ಹೇಳಿದ್ದಾರೆ.

ವರದಿಗಾರರೊಂದಿಗೆ ಮಾತನಾಡಿರುವ ವಿದೇಶಾಂಗ ಸಚಿವರು, ವಿದೇಶಗಳಲ್ಲಿ ಭಾರತೀಯ ವಿದ್ಯಾರ್ಥಿಗಳ ಹತ್ಯೆಗೆ ಸಂಬಂಧಿಸಿದ ಪ್ರಶ್ನೆಗೆ ಉತ್ತರಿಸಿದ್ದು, ಪ್ರತಿ ಪ್ರಕರಣವೂ ದುರದೃಷ್ಟಕರ, ಕುಟುಂಬಸ್ಥ-ರಿಗೆ ಅತ್ಯಂತ ನೋವಿನ ಸಂಗತಿಯಾಗಿದ್ದು, ನಮಗೂ ಆತಂಕಕಾರಿ ಎಂದು ಹೇಳಿದ್ದಾರೆ. ಪ್ರತಿ ಪ್ರಕರಣಕ್ಕೆ ಸಂಬಂಧಿಸಿದಂತೆಯೂ ನಮ್ಮ ರಾಯಭಾರ ಕಚೇರಿ ಅಥವಾ ದೂತವಾಸ ಕಚೇರಿ ಪರಿಶೀಲನೆ ನಡೆಸಿದೆ. ಆದರೆ ಅದಕ್ಕೆ ಯಾವುದಕ್ಕೂ ವಾಸ್ತವದಲ್ಲಿ ಕಾನೂನು ರೀತಿಯಲ್ಲಿ ಭಾರತಕ್ಕೆ ಸಂಬಂಧವಿಲ್ಲ ಎಂದು ಹೇಳಿದ್ದಾರೆ.

ವಿದ್ಯಾರ್ಥಿಗಳೊಂದಿಗೆ ಸಂಪರ್ಕದಲ್ಲಿರಲು ಮತ್ತು ಅವರೊಂದಿಗೆ ಚಾಟ್ ಮಾಡಲು ರಾಯಭಾರ ಕಚೇರಿಗಳಿಗೆ ಸೂಚನೆ ನೀಡಲಾಗಿದೆ, ವಿಶೇಷವಾಗಿ ನಗರಗಳ ಅಪಾಯಕಾರಿ ಪ್ರದೇಶಗಳ ಬಗ್ಗೆ ಎಚ್ಚರಿಸಲು, ವಿವಿಧ ದೇಶಗಳಲ್ಲಿ 11 ಲಕ್ಷದಿಂದ 12 ಲಕ್ಷ ಭಾರತೀಯ ವಿದ್ಯಾರ್ಥಿಗಳು ವಾಸಿಸುತ್ತಿದ್ದಾರೆ ಎಂದು ಜೈಶಂಕರ್ ಹೇಳಿದ್ದಾರೆ.

ವಿದ್ಯಾರ್ಥಿ ಕಲ್ಯಾಣ ಬಹಳ ಮುಖ್ಯ. ನಾನು ಹೇಳಿದಂತೆ ಪ್ರತಿಯೊಬ್ಬ ಭಾರತೀಯನೂ ಹೊರಗೆ ಹೋಗುವಾಗ ಮೋದಿಯವರ ಗ್ಯಾರಂಟಿ ಇದೆ. ವಿದ್ಯಾರ್ಥಿ ಕ್ಷೇಮ ನಮಗೆ ಮುಖ್ಯವಾಗಿದೆ ಎಂದು ಜೈಶಂಕರ್ ಹೇಳಿದರು.

ಇರಾನ್ ಸೇನೆ ವಶಕ್ಕೆ ಪಡೆದಿರುವ ಪೋರ್ಚುಗೀಸ್ ಸರಕು ಹಡಗಿನಲ್ಲಿ 17 ಮಂದಿ ಭಾರತೀಯರಿದ್ದು, ಅವರ ಬಿಡುಗಡೆಗೆ ಭಾರತ ಇರಾನ್ ಗೆ ಮನವಿ ಮಾಡಿದೆ ಎಂದು ಇದೇ ವೇಳೆ ಜೈಶಂಕರ್ ತಿಳಿಸಿದ್ದಾರೆ.

ಭಾರತದ ಮನವಿಗೆ ಇರಾನ್ ಸಕಾರಾತ್ಮಕವಾಗಿ ಪ್ರತಿಕ್ರಿಯೆ ನೀಡಿದೆ. ಈ ಸಂಬಂಧದ ಬೆಳವಣಿಗೆಗಳ ಸಂವಹನಗಳು ಭಾರತ- ಇರಾನ್ ನಡುವೆ ನಡೆಯಲಿದೆ ಎಂದು ಜೈಶಂಕರ್ ಹೇಳಿದ್ದಾರೆ.

## 'ಪ್ರತಿಯೊಬ್ಬರೂ ವಿಷಾದಿಸುತ್ತಾರೆ': ಚುನಾವಣಾ ಬಾಂಡ್ ಯೋಜನೆ ರದ್ದತಿ ಬಗ್ಗೆ ಪ್ರಧಾನಿ ಮೋದಿ ಟೀಕೆ



ನವದೆಹಲಿ: ಚುನಾವಣಾ ಬಾಂಡ್ ಯೋಜನೆಗಳ ಬಗ್ಗೆ ಪ್ರತಿಪಕ್ಷಗಳು ಸುಳ್ಳನ್ನು ಹಬ್ಬಿಸುತ್ತಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಆರೋಪಿಸಿದ್ದಾರೆ. ಈ ವಿಷಯದಲ್ಲಿ ಪ್ರಾಮಾಣಿಕ ಅಭಿಪ್ರಾಯ ವ್ಯಕ್ತವಾದಾಗ ಎಲ್ಲರಿಗೂ ವಿಷಾದ ಉಂಟಾಗಲಿದೆ ಎಂದು ಮೋದಿ ಹೇಳಿದ್ದಾರೆ.


ಎಎನ್‌ಐ ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿರುವ ಪ್ರಧಾನಿ ನರೇಂದ್ರ ಮೋದಿ, ಚುನಾವಣೆಗಳಲ್ಲಿ ಕಪ್ಪು ಹಣ-ಕ್ಕೆ ಕಡಿವಾಣ ಹಾಕುವ ದೃಷ್ಟಿಯಿಂದ ಚುನಾವಣಾ ಬಾಂಡ್ ಗಳನ್ನು ಪರಿಚಯಿಸಲಾಗಿತ್ತು. ಆದರೆ ವಿಪಕ್ಷಗಳು ಆರೋಪಗಳನ್ನು ಮಾಡಿದ ಬಳಿಕ ಪಲಾಯನ ಮಾಡಲು ಬಯಸುತ್ತಿವೆ ಎಂದು ಮೋದಿ ಆರೋಪಿಸಿದ್ದಾರೆ. ಚುನಾವಣಾ ಬಾಂಡ್‌ಗಳ ಯೋಜನೆಗೆ ತಮ್ಮ ಮೊದಲ ವಿವರವಾದ ಪ್ರತಿಕ್ರಿಯೆ ನೀಡಿರುವ ಪ್ರಧಾನಿ ಮೋದಿ, ಈ ಯೋಜನೆಯನ್ನು "ಯಶಸ್ಸಿನ ಕಥೆ" ಎಂದು ಪರಿಗಣಿಸಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಏಕೆಂದರೆ ಈ ಯೋಜನೆ ಯಾರು ಕೊಡುಗೆ ನೀಡಿದ್ದರು ಎಂಬುದನ್ನು ತಿಳಿಯಲು ಅವಕಾಶ ಮಾಡಿಕೊಟ್ಟಿದೆ. ಈ ಯೋಜನೆಯನ್ನು ಸುಧಾರಿಸುವುದಕ್ಕೆ ಹಲವು ಅವಕಾಶಗಳಿವೆ ಎಂದೂ ಮೋದಿ ಹೇಳಿದ್ದಾರೆ. ಸಂಬಂಧಿತ ಮಸೂದೆಯನ್ನು ಅಂಗೀಕ-ರಿಸಿದಾಗ ಚುನಾವಣಾ ಬಾಂಡ್‌ಗಳ ಯೋಜನೆ ಕು-ರಿತು ಸಂಸತ್ತಿನಲ್ಲಿ ಚರ್ಚೆ ನಡೆದಿತ್ತು ಮತ್ತು ಈಗ ಅದರ ಬಗ್ಗೆ ಪ್ರತಿಕ್ರಿಯಿಸುತ್ತಿರುವ ಕೆಲವರು ಅದನ್ನು ಬೆಂಬಲಿಸಿದ್ದಾರೆ ಎಂದು ಮೋದಿ ಹೇಳಿದ್ದಾರೆ.

ಯೋಜನೆಯ ಮೂಲಕ ದೇಣಿಗೆ ನೀಡಿದ 3,000 ಕಂಪನಿಗಳ ಪೈಕಿ 26 ಕಂಪನಿಗಳು ಜಾರಿ ನಿರ್ದೇಶನಾಲಯದಂತಹ ತನಿಖಾ ಸಂಸ್ಥೆಗಳಿಂದ ಕ್ರಮವನ್ನು ಎದುರಿಸುತ್ತಿವೆ ಎಂದು ಪ್ರಧಾನಿ ಹೇಳಿದ್ದಾರೆ.

ಈ 26 ಕಂಪನಿಗಳಲ್ಲಿ 16 ಮಂದಿ ಚುನಾವಣಾ ಬಾಂಡ್‌ಗಳನ್ನು ತೆಗೆದುಕೊಂಡಿವೆ. "ಇವುಗಳಲ್ಲಿ (16 ಕಂಪನಿಗಳು) ಶೇಕಡಾ 37 ರಷ್ಟು ಮೊತ್ತವು ಬಿಜೆಪಿಗೆ ಮತ್ತು ಶೇಕಡಾ 63 ರಷ್ಟು ಬಿಜೆಪಿಯನ್ನು ವಿರೋಧಿಸುವ ವಿರೋಧ ಪಕ್ಷಗಳಿಗೆ ಹೋಗಿವೆ.

ಈ ವರ್ಷ ಫೆಬ್ರವರಿಯಲ್ಲಿ ಸುಪ್ರೀಂ ಕೋರ್ಟ್ ಚುನಾವಣಾ ಬಾಂಡ್‌ಗಳ ಯೋಜನೆಯನ್ನು ರದ್ದುಗೊಳಿಸಿತು ಮತ್ತು ಇದು ಅಸಾಂವಿಧಾನಿಕ ಎಂದು ಹೇಳಿದೆ. ವಿಪಕ್ಷಗಳ ಮೈತ್ರಿಕೂಟ ಇಂಡಿಯಾ ಬ್ಲಾಕ್ ಚುನಾವಣಾ ಪ್ರಚಾರದಲ್ಲಿ ಬಿಜೆಪಿ ನೇತೃತ್ವದ ಸರ್ಕಾರವನ್ನು ಚುನಾವಣಾ ಬಾಂಡ್‌ಗಳ ಯೋಜನೆಗೆ ಗುರಿಯಾಗಿಸುತ್ತಿವೆ.

## 200 ಕೋಟಿ ರೂ. ಮೌಲ್ಯದ ಸಂಪತ್ತು ದಾನ ಮಾಡಿ ಸನ್ಯಾಸತ್ವ ಸ್ವೀಕರಿಸಿದ ಉದ್ಯಮಿ ದಂಪತಿ



ಅಹಮದಾಬಾದ್: ಗುಜರಾತ್‌ನ ಸಬರಕಾಂತ ಜಿಲ್ಲಯ ಹಿಮ್ಮತ್‌ನಗರದ ನಿವಾಸಿಗಳಾದ ಭವೇಶ್‌ಭಾಯ್ ಭಂಡಾರಿ ಮತ್ತು ಅವರ ಪತ್ನಿ ಜಿನಾಲ್ ಭಂಡಾರಿ ಅವರು ಉದಾರವಾಗಿ ಸುಮಾರು ?200 ಕೋಟಿ ರೂ. ಮೌಲ್ಯದ ಸಂಪತ್ತನೆಲ್ಲಾ ದಾನ ಮಾಡಿ ಸನ್ಯಾಸ ಸ್ವೀಕರಿಸಿದ್ದಾರೆ. ಈ ಮೂಲಕ ಭಕ್ತಿ ಹಾಗೂ ನಿಸ್ವಾರ್ಥತೆಯನ್ನು ಎತ್ತಿ ತೋರಿಸಿದ್ದಾರೆ.

ಫೆಬ್ರವರಿಯಲ್ಲಿ ನಡೆದ ಸಮಾರಂಭದಲ್ಲಿ ತಮ್ಮ ಎಲ್ಲಾ ಸಂಪತ್ತನ್ನು ದಾನ ಮಾಡಿದ ನಂತರ ಮೋಕ್ಷಕ್ಕಾಗಿ ಸನ್ಯಾಸತ್ವ ಸ್ವೀಕರಿಸುವ ನಿರ್ಧಾರ ತೆಗೆದುಕೊಳ್ಳುತ್ತಾರೆ. 2022 ರಲ್ಲಿ ಸನ್ಯಾಸ್ಯತ್ವ ಸ್ವೀಕರಿಸಿದ ಅವರ 19 ವರ್ಷದ ಮಗಳು ಮತ್ತು 16 ವರ್ಷದ ಮಗನ ದಾರಿಯನ್ನು ಅವರು ಅನುಸರಿಸಿದ್ದಾರೆ. ಈ ಹಿಂದೆ ನಿರ್ಮಾಣ ವ್ಯವಹಾರದಲ್ಲಿ ತೊಡಗಿದ್ದ ಭವೇಶ್‌ಭಾಯ್ ಮತ್ತು ಅವರ ಪತ್ನಿ ತಮ್ಮ ಮಕ್ಕಳಿಂದ ಸ್ಫೂರ್ತಿ ಪಡೆದ ದಂಪತಿ ಕೂಡ ಇದೀಗ ಆಸ್ತಿ ಸಂಪತ್ತನ್ನು ತ್ಯಜಿಸಿ ಸನ್ಯಾಸತ್ವ ಸ್ವೀಕರಿಸಲು ಮುಂದಾಗಿದ್ದಾರೆ.

ಸನ್ಯಾಸಿಗಳು ಸಂಯಮದಿಂದ ಜೀವನ ನಡೆಸಬೇಕು ಎಂದು ಅವರು ಎತ್ತಿ ತೋರಿಸಿದ್ದಾರೆ. ಇದರಲ್ಲಿ ಜೀವನಾಂಶಕ್ಕಾಗಿ ಭಿಕ್ಷೆ ಬೇಡುವುದು ಮತ್ತು ಹವಾನಿಯಂತ್ರಣ, ಫ್ಯಾನ್ ಮತ್ತು ಮೊಬೈಲ್ ಫೋನ್‌ಗಳಂತಹ ಆಧುನಿಕ ಸೌಕರ್ಯಗಳನ್ನು ತ್ಯಜಿಸುವುದು ಸೇರಿದೆ. ಅಲ್ಲದೇ, ತಮ್ಮ ಸನ್ಯಾಸತ್ವ ಸ್ವೀಕಾರದ ಭಾಗವಾಗಿ ಬರಿಗಾಲಿನಲ್ಲಿ ದೇಶವನ್ನು ಸಂಚರಿಸುವ ನಿರೀಕ್ಷೆಯಿದೆ ಎಂದು ಅವರ ಪರಿಚಯಸ್ಥರಾದ ದಿಲೀಪ್ ಗಾಂಧಿ ಜೈನ ಸಮಾಜದಲ್ಲಿ ಸನ್ಯಾಸತ್ವದ ಮಹತ್ವವನ್ನು ತಿಳಿಸಿದರು.

ಭಾವೇಶ್ ಮತ್ತು ಜಿನಾಲ್ ಏಪ್ರಿಲ್ 22 ರಂದು ಸನ್ಯಾಸತ್ವದ ಹಾದಿಯನ್ನು ಆರಂಭಿಸಲಿದ್ದಾರೆ. ಅಹಮದಾಬಾದ್‌ನ ರಿವರ್‌ಫ್ರಂಟ್‌ನಲ್ಲಿ ನಿಗದಿಪಡಿಸಲಾದ ಸಮಾರಂಭದಲ್ಲಿ ದೀಕ್ಷೆಗೆ ಒಳಗಾಗುವ 36 ವ್ಯಕ್ತಿಗಳಲ್ಲಿ ಅವರು ಸೇರಿದ್ದಾರೆ. ತಮ್ಮ ಗಣನೀಯ ಸಂಪತ್ತಿಗೆ ಹೆಸರಾದ ಭಂಡಾರಿ ಕುಟುಂಬದ ಆಯ್ಕೆಯು ರಾಜ್ಯದಾದ್ಯಂತ ವ್ಯಾಪಕ ಗಮನವನ್ನು ಸೆಳೆದಿದೆ.

## ಕಾನೂನು ಮಾಪನಶಾಸ್ತ್ರ ಇಲಾಖೆಯ ಪ್ರಗತಿ

ಶಿವಮೊಗ್ಗ: ಶಿವಮೊಗ್ಗ ಜಿಲ್ಲೆಯಲ್ಲಿ 2023-24 ನೇ ಸಾಲಿನಲ್ಲಿ ಏಪ್ರಿಲ್ -2023 ರಿಂದ ಮಾರ್ಚ-2024 ರವರೆಗೆ ಕಾನೂನು ಮಾಪನಶಾಸ್ತ್ರ ಇಲಾಖೆಯಿಂದ ಸಾಧಿಸಲಾದ ಪ್ರಗತಿಯ ವಿವರವನ್ನು ಇಲಾಖೆಯ ಸಹಾಯಕ ನಿಯಂತ್ರಕರು ಈ ಕೆಳಗಿನಂತೆ ನೀಡಿರುತ್ತಾರೆ.

ತೂಕ, ಅಳತೆ ಸಾಧನಗಳ ಸತ್ಯಾಪನೆ/ಮುದ್ರೆಯಿಂದ ಸಂಗ್ರಹಿಸಿದ ಶುಲ್ಕ ರೂ. 2,27,27,226/- ಆಗಿರುತ್ತದೆ. ತಪಾಸಣೆ ಮಾಡಿರುವ ವ್ಯಾಪಾರಸ್ಥರ ಮತ್ತು ಕೈಗಾರಿಕೆಗಳ ಸಂಖ್ಯೆ 2670. ತಪ್ಪಿತಸ್ಥರ ಮೇಲೆ ಹೂಡಿರುವ ಮೊಕದ್ದಮೆಗಳ ಸಂಖ್ಯೆ 610 ಆಗಿರುತ್ತದೆ. ರಾಜಿ ಅಭಿಸಂದಾನ ಮಾಡಿರುವ ಮೊಕದ್ದಮೆಗಳ ಸಂಖ್ಯೆ 612. ಮೊಕದ್ದಮೆಗಳನ್ನು ರಾಜಿ ಅಭಿಸಂಧಾನ ಮಾಡಿ ವಿಧಿಸಿದ ದಂಡ ರೂ.19,59,500/- ಆಗಿದ್ದು, 52 ಗ್ರಾಹಕ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗಿದೆ ಎಂದು ಕಾನೂನು ಮಾಪನಶಾಸ್ತ್ರ ಇಲಾಖೆಯ ಸಹಾಯ ನಿಯಂತ್ರಕ ಹೆಚ್.ಎಸ್.ರಾಜು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನಾಮದೇಯ ವ್ಯಕ್ತಿಯ ಶವ ಪತ್ತೆ; ವಾರಸ್ಸುದಾರರ ಪತ್ತೆಗೆ ಮನವಿ

ಶಿವಮೊಗ್ಗ: ಏ.13 ರಂದು ಕೋಟೆ ಪೊಲೀಸ್ ಠಾಣೆ ವ್ಯಾಪ್ತಿಯ ಹೊಳೆ ಬಸ್ ಸ್ಟ್ಯಾಪ್ ರೈಲ್ವೇ ಬ್ರಿಡ್ಜ್ ಕೆಳಗೆ ತುಂಗಾ ನದಿಯಲ್ಲಿ ಸುಮಾರು 35 ರಿಂದ 40 ವರ್ಷದ ಅನಾಮದೇಯ ವ್ಯಕ್ತಿಯು ಮೃತಪಟ್ಟಿದ್ದು, ಶವವನ್ನು ಮೆಗ್ಗಾನ್ ಆಸ್ಪತ್ರೆಯ ಶವಾಗಾರದಲ್ಲಿ-ರಿಸಲಾಗಿದೆ. ಈತನ ಚಹರೆ ಸುಮಾರು 05.02 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು, ದುಂಡು ಮುಖ ಹೊಂದಿದ್ದು, ತಲೆಯಲ್ಲಿ 2 ಇಂಚು ಉದ್ದದ ಕಪ್ಪು ಕೂದಲು ಹಾಗೂ ಕುರುಚಲು ಗಡ್ಡ ಇರುತ್ತದೆ. ಮೃತನ ಮೈಮೇಲೆ ತಿಳಿಹಸಿರು ತಿಳಿಕೇಸರಿ ಮಿಶ್ರಿತ ಬಣ್ಣದ ತುಂಬುತೋಳಿನ ಶರ್ಟ್ ಹಾಗೂ ನೀಲಿ ಬಣ್ಣದ ನೈಟ್ ಪ್ಯಾಂಟ್ ಧರಿಸಿರುತ್ತಾನೆ.

ಈ ಮೃತನ ವಾರಸ್ಸುದಾರರು ಅಥವಾ ವಿಳಾಸ ಪತ್ತೆಯಾಗಿರುವುದಿಲ್ಲ. ಈ ವ್ಯಕ್ತಿಯ ವಾರಸ್ಸುದಾರರು ಪತ್ತೆಯಾದಲ್ಲಿ ಕೋಟೆ ಪೊಲೀಸ್ ಠಾಣೆಯನ್ನು ಸಂಪರ್ಕಿಸಿ ಮಾಹಿತಿ ನೀಡುವಂತೆ ಪೊಲೀಸ್ ಇನ್ಸ್ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಲೋಕಸಭಾ ಚುನಾವಣೆ-24; ಸೋಮವಾರ 05 ನಾಮಪತ್ರ ಸಲ್ಲಿಕೆ

ಶಿವಮೊಗ್ಗ: ಶಿವಮೊಗ್ಗ ಲೋಕಸಭಾ ಮತಕ್ಷೇತ್ರದ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಏ.15 ರಂದು ಒಟ್ಟು 05 ನಾಮಪತ್ರ ಸಲ್ಲಿಕೆ ಆಗಿವೆ. ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದಿಂದ ಗೀತಾ ಶಿವರಾಜ್ ಕುಮಾರ್ 02 ನಾಮಪತ್ರಗಳು, ಪಕ್ಷೇತರ ಅಭ್ಯರ್ಥಿಗಳಾಗಿ ಕೆ.ಎಸ್.ಈಶ್ವರಪ್ಪ, ಪಿ.ಶ್ರೀಪತಿ ಮತ್ತು ಎನ್.ವಿ.ನವೀನ್ ಕುಮಾರ್ ಸೇರಿದಂತೆ ಇಂದು ನಾಲ್ಕು ಜನ ಅಭ್ಯರ್ಥಿಗಳಿಂದ ಒಟ್ಟು 05 ನಾಮಪತ್ರಗಳು ಸಲ್ಲಿಕೆಯಾಗಿವೆ

## ಸರ್ಟಿಫಿಕೇಟ್ ಕೋರ್ಸ್ಗಳಿಗೆ ಅರ್ಜಿ ಆಹ್ವಾನ

ಶಿವಮೊಗ್ಗ: ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ 2023-24 ನೇ ಸಾಲಿನ ಶೈಕ್ಷಣಿಕ ವರ್ಷದ ಸರ್ಟಿಫಿಕೇಟ್ ಕೋರ್ಸ್ಗಳಿಗೆ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಸುಸ್ಥಿರ ಜೀವನೋಪಾಯಕ್ಕಾಗಿ ಹೈಟೆಕ್ ಅಣಬೆ ಉತ್ಪಾದನಾ ತಂತ್ರಜ್ಞಾನ ತರಬೇತಿಯನ್ನು ಶುಲ್ಕ ರೂ. 4000 ಹಾಗೂ ಬೇಕರಿ ಮತ್ತು ಮಿಠಾಯಿ (ಬಿಸ್ಕತ್ತಗಳು ಮತ್ತು ಕೇಕ್ಗಳು) ತರಬೇತಿ ಶುಲ್ಕ ರೂ. 2000 ಗಳಂಎ ದಿನಾಂಕ 22-04-2024 ರಿಂದ 03-05-2024ರ ವರೆಗೆ 10 ದಿನಗಳ ಕೋರ್ಸ್ನ್ನು ಶಿವಮೊಗ್ಗದ ನವುಲೆಯ ಕೃಷಿ ವಿಶ್ವವಿದ್ಯಾಲಯದಲ್ಲಿ ನಡೆಸಲಾಗುವುದು. ನಿರ್ದಿಷ್ಟಪಡಿಸಿದ ವಿಷಯದ ಮೇಲೆ ಸಾಕ್ಷರತೆ ಮತ್ತು ಕನ್ನಡ ಅಥ-'ವಾ ಇಂಗ್ಲೀಷ್ ಜ್ಞಾನ್ನವನ್ನು ಹೊಂದಿದವರಿಗೆ ಆದ್ಯತೆ ನೀಡಲಾಗುವುದು. ಆಸಕ್ತರು ದಿನಾಂಕ 20-04-2024 ರೊಳಗೆ ತಮ್ಮ ಹೆಸರನ್ನು ನೋಂದಣಿ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗೆ ವಿಷಯ ನಿರ್ದೇಶಕಿ ಡಾ.ಸುಧಾರಾಣಿ ಎನ್, ಕೃಷಿ ವಿಜ್ಞಾನ ಕೇಂದ್ರ, ಮೊ.ಸಂ: 9482024908 ಇಮೇಲ್ **nsudharani@uahs.edu.in** ಸಂಪರ್ಕಿಸಬಹುದೆಂದು ಎಂದು ತಿಳಿಸಿದ್ದಾರೆ.

# ಮೋದಿ ಗ್ಯಾರಂಟಿಗೆ ನೋ ವಾರಂಟಿ ಎಂದ ಸಚಿವ ಪ್ರಿಯಾಂಕ್ ಖರ್ಗೆ

ಕಲಬುರಗಿ: ಹತ್ತು ವರ್ಷ ಆಡಳಿತ ನಡೆಸಿದ ಪ್ರಧಾನಿ ನರೇಂದ್ರ ಮೋದಿ ಯಾವುದೇ ಗ್ಯಾರಂಟಿ ನೀಡದೆ ಈಗ ಗ್ಯಾರಂಟಿ ಎನ್ನುತ್ತಿದ್ದು, ಇದಕ್ಕೆ ಯಾವುದೇ ವಾರಂಟಿ ಇಲ್ಲ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಟೀಕಿಸಿದರು.

ಪಕ್ಷದ ಕಚೇರಿಯಲ್ಲಿ ಕರೆಯಲಾದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎರಡು ಕೋಟಿ ಉದ್ಯೋಗ ಸೃಷ್ಟಿ, ರೈತರ ಆದಾಯ ದುಪ್ಪಟ್ಟು, ವಿದೇಶದಲ್ಲಿನ ಕಪ್ಪು ಹಣ ತರುವುದು ಸೇರಿದಂತೆ ಇತರ ಗ್ಯಾರಂಟಿಗಳು ಏನಾದವು.

ಹೀಗಾಗಿ ಮೋದಿ ಗ್ಯಾರಂಟಿ ಪ್ರಚಾರಕ್ಕೆ ಮಾತ್ರ ಸೀಮಿತ. ಕಾಂಗ್ರೆಸ್ ಗ್ಯಾರಂಟಿಗೆ ವಾರಂಟಿ ಇದೆ. ಇದಕ್ಕೆ ರಾಜ್ಯ ಸರ್ಕಾರದ ಗ್ಯಾರಂಟಿಗಳೇ ಸಾಕ್ಷಿ. ಅದೇ ರೀತಿ ಎಐಸಿಸಿ ಪ್ರಕಟಿಸಿದ 25 ಗ್ಯಾರಂಟಿಗಳ ಬಗ್ಗೆ ದೇಶದ ಜನತೆಗೆ ವಿಶ್ವಾಸ ಬಂದಿದ್ದರಿಂದ ಅಬ್ ಕಿ ಬಾರ್ ಬಿಜೆಪಿ ಸಂಸತ್ ಸೇ ಬಾಹರ್ ಆಗಲಿದೆ ಎಂದರು.

ಕಾಂಗ್ರೆಸ್ ಪಕ್ಷದ ಗ್ಯಾರಂಟಿಗಳನ್ನೇ ಬಿಜೆಪಿ ನಕಲು ಮಾಡಿದ್ದು, ಆದರೆ ಜನರಿಗೆ ಬಿಜೆಪಿ ಗ್ಯಾರಂಟಿ ಬಗ್ಗೆ ವಿಶ್ವಾಸವಿಲ್ಲ. ಕಾಲಕ್ಕೆ ತಕ್ಕಂತೆ ಬರೀ ಹೊಸ ಸ್ಲೋಗನ್ ಸೇರಿಸುತ್ತಾ ಇವೆಂಟ್ ಮ್ಯಾನೇಜ್ಮೆಂಟ್ ಮಾಡಲಾಗುತ್ತಿದೆ ಎಂದು ಟೀಕಿಸಿದರು.

ಪ್ರಣಾಳಿಕೆ ಅಲ್ಲ ಪಿಎಂ ಫೋಟೋ ಅಲ್ಬಂ: ಲೋಕಸಭಾ ಚುನಾವಣೆಗೆ ಘೋಷಣೆ ಮಾಡಿರುವ ಬಿಜೆಪಿ ಪ್ರಣಾಳಿಕೆಯು ಮೋದಿ ಫೋಟೊ ಅಲ್ಬಂನಂತಿದೆ, ಯಾವುದೆ ಸ್ಪಷ್ಟತೆ ಇಲ್ಲ. ಅವರ ಪಿಕ್ ನಿಕ್ ವಿಭಿನ್ನ ಫೋಟೋಗಳು ಬಿಟ್ಟರೆ ಯುವಕರಿಗೆ,ಮಹಿಳೆಯರಿಗೆ, ರೈತ-ರಿಗೆ, ಬಡವರಿಗೆ, ಶ್ರಮಿಕರಿಗೆ, ನಿರ್ಗತಿಕ-ರಿಗೆ ಉಪಯೋಗವಾಗುವಂತ ಯಾವುದೇ ಅಂಶಗಳಿಲ್ಲ ಎಂದು ಟೀಕಿಸಿದರು. ದುರಂತವೆಂದರೆ ಪ್ರಣಾಳಿಕೆಯಲ್ಲಿ ಕೇಂದ್ರ ಸರ್ಕಾರ ಅಧೀನದ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಕುರಿತಾಗಿ ಚಕಾರವೆತ್ತಿಲ್ಲ ಎಂದು ಸಚಿವ ಖರ್ಗೆ ಆಕ್ಷೇಪಿಸಿದರು.

ಯುವಕರ ಬಗ್ಗೆ ಮೋದಿಯ ಗ್ಯಾರಂ-ಟಿಯಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆ ತಡೆಗೆ



ಕಾಯಿದೆ ತರಲಾಗುವುದು ಎಂದಿದೆ. ಅವರದೇ ಪಕ್ಷ ಇಲ್ಲಿ ಅಧಿಕಾರದಲ್ಲಿದ್ದಾಗ ಪರೀಕ್ಷೆಗಳಲ್ಲಿ ಅವಾಂತರ ನಡೆದಿತ್ತು. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದಾಗ ಪರೀಕ್ಷೆಗಳ ಅಕ್ರಮ ತಡೆಗೆ ಬಿಲ್ ಪಾಸ್ ಮಾಡಿ ಅದನ್ನು ರಾಜ್ಯಪಾಲರ ಸಹಿಗೆ ಕಳಿಸಲಾಗುತ್ತು. ಆದರೆ, ಬಿಲ್ ವಾಪಸ್ ಬಂದಿದೆ ಎಂದರು.

ಕೇಂದ್ರದ ಅಂಕಿ ಅಂಶಗಳ ಪ್ರಕಾರ, ಕೇಂದ್ರ ಸರ್ಕಾರದಲ್ಲಿ 30 ಲಕ್ಷ ಕೇಂದ್ರದ ಹುದ್ದೆಗಳು ಖಾಲಿ ಇವೆ. ಅವುಗಳಲ್ಲಿ 9.64 ಲಕ್ಷ ಹುದ್ದೆಗಳು ಹಣಕಾಸು ಇಲಾಖೆಯಲ್ಲಿ, 3 ಲಕ್ಷ ಹುದ್ದೆಗಳು ರೇಲ್ವೆ ಇಲಾಖೆಯಲ್ಲಿ, 2.2 ಲಕ್ಷ ಹುದ್ದೆಗಳು ಸೇನೆಯ ಸಿವಿಲ್ ವಿಭಾಗದಲ್ಲಿ, 1.20 ಲಕ್ಷ ಹುದ್ದೆಗಳು ಅಂಚೆ ಇಲಾಖೆಯಲಿ, 74,000 ಹುದ್ದೆಗಳು ಕಂದಾಯ ಇಲಾಖೆಯಲ್ಲಿ ಖಾಲಿ ಇವೆ. ಈ ಎಲ್ಲ ಹುದ್ದೆ ತುಂಬಲು ಯಾವ ಕ್ರಮ ಕೈಗೊಳ್ಳಲಾಗುವುದು ಎನ್ನುವ ಕುರಿತು ಬಿಜೆಪಿ ಪ್ರಣಾಳಿಕೆಯಲ್ಲಿ ಇಲ್ಲ. ಖಅಔ ವರದಿ ಪ್ರಕಾರ 83% ಯುವಕರು ನಿರುದ್ಯೋಗಿಗಳಾಗಿದ್ದಾರೆ. ಲೋಕನೀತಿ ಸರ್ವೆ ಪ್ರಕಾರ, 79% ಯುವಕ-ರಿಗೆ ಉದ್ಯೋಗ ಅವಕಾಶಗಳು ಸಿಗುತ್ತಿಲ್ಲ. ಈ ಬಗ್ಗೆ ಯಾವುದೇ ಸ್ಪಷ್ಟತೆ ಇಲ್ಲ ಎಂದು ಟೀಕಿಸಿದರು.

ಬಿಜೆಪಿಯವರು ಸ್ಕಿಲ್ ಇಂಡಿಂ-ಯಾ ಯೋಜನೆಯಡಿಯಲ್ಲಿ 2022 ರ ಒಳಗಾಗಿ 40 ಕೋಟಿ ಯುವಕರಿಗೆ ತರಬೇತಿ ನೀಡುವುದಾಗಿ ಹೇಳಿದ್ದು ಈ ಗುರಿಯಲ್ಲಿ ಇದೂವರೆಗೆ ಕೇವಲ 3.51% (1.40 ಕೋಟಿ) ಜನರಿಗೆ ತರಬೇತಿ ನೀಡಿದ್ದಾರೆ ಹೊರತು ಉದ್ಯೋಗ ನೀಡಿಲ್ಲ. ಈ 3.51% ರಲ್ಲಿ 80% ಯುವಕರಿಗೆ ಉದ್ಯೋಗ ಸಿಕ್ಕಿಲ್ಲ 20% ಯುವಕರು ಈ ಯೋಜನೆ ಉಪಯೋಗ ಇಲ್ಲ ಎಂದು ಬಿಟ್ಟು ಹೋಗಿದ್ದಾರೆ ಎಂದು ಅಂಕಿ ಅಂಶ ನೀಡಿ ವಿವರಿಸಿದರು.

ಕಳೆದ ಸಲ ಬಂದಾಗ ಮೈಸೂರು, ಹಂಪಿ ಅಂಜನಾದ್ರಿ ಅಭಿವೃದ್ಧಿ ಮಾಡುವುದಾಗಿ ಮೋದಿ ಹೇಳಿದ್ದರು ಅವೆಲ್ಲ ಏನಾಯ್ತು?. ಈಗ ಮತ್ತೆ ನಿನ್ನೆ ಅದೇ ಮಾತನ್ನೇ ಹೇಳಿದ್ದಾರೆ ಎಂದ ಖರ್ಗೆ ರಾಜ್ಯಕ್ಕೆ ಕೇಂದ್ರದಿಂದ ಬರಬೇಕಾಗಿದ್ದ ಬರ ಪರಿಹಾರ, ತೆರಿಗೆ ಪರಿಹಾರ ಕು-ರಿತು ಮಾತೇ ಆಡಿಲ್ಲ. ದೇವೇಗೌಡ, ಕುಮಾರಸ್ವಾಮಿ, ಯಡಿಯೂರಪ್ಪ ಹಾಗೂ ವಿಜಯೇಂದ್ರ ಅವರನ್ನು ಪಕ್ಕ ಕೂಡಿಸಿಕೊಂಡು ಕಾಂಗ್ರೆಸ್ ಪಕ್ಷದ ಕುಟುಂಬ ರಾಜಕಾರಣ ಹಾಗೂ ಭ್ರಷ್ಟಚಾರ ಬಗ್ಗೆ ಮಾತನಾಡುತ್ತಾರೆ. ಯಡಿಯೂರಪ್ಪ ಭ್ರಷ್ಟಾಚಾರ ಮಾಡಿದ್ದಾರೆ ಎಂದು ತಾನೆ ಅವರನ್ನು ಸಿಎಂ ಸ್ಥಾನದಿಂದ ಇಳಿಸಿದ್ದು? ಯಡಿಯೂರಪ್ಪ ವಿಜಯೇಂದ್ರ ಅವರದ್ದು ಕುಟುಂಬ ರಾಜಕಾರಣವಲ್ಲವೇ? ಎಂದು ಪ್ರಶ್ನಿಸಿದರು.

ಮಹಿಳೆಯರಿಗೆ ಅನುಕೂಲವಾಗಲೆಂದು ನಮ್ಮ ಸರ್ಕಾರ ಶಕ್ತಿ, ಗೃಹಲಕ್ಷ್ಮೀ ಯೋಜನೆಗಳನ್ನು ಜಾರಿಗೆ ತಂದಿದೆ. ಆದ-'ರೆ, ಬಿಜೆಪಿಯ ಮಿತ್ರ ಪಕ್ಷ ಜೆಡಿಎಸ್ ನ ಕುಮಾರಸ್ವಾಮಿ ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರು ದಾರಿ ತಪ್ಪಿದ್ದಾರೆ ಎಂದು ಹಗುರವಾಗಿ ಮಾತನಾಡಿದ್ದಾರೆ. ಈ ಬಗ್ಗೆ ಮೋದಿ, ವಿಜಯೇಂದ್ರ, ಅಶೋಕ ಸ್ಪಷ್ಟಿಕರಣ ನೀಡಿಲಿ. " ಕುಮಾರಸ್ವಾಮಿ ವೆಸ್ಟ ಎಂಡ್ ನಲ್ಲಿ ಹಾಗೂ ತೋಟದ ಮನೆಯಲ್ಲಿ ಇದ್ದರೆ ಜನರ ಕಷ್ಟ ಅರ್ಥವಾಗುವುದಿಲ್ಲ. ಹೊರಗಡೆ ಬಂದು ನೋಡಲಿ" ಎಂದು ತಿರುಗೇಟು ನೀಡಿದರು.

ಯುಪಿಎ ಸರ್ಕಾರ ಇದ್ದಾಗ 34% ಮಹಿಳೆಯರು ಉದ್ಯೋಗ ದಲ್ಲಿ ತೊಡಗಿಸಿಕೊಂಡಿದ್ದರೆ, ಈಗ ಕೇವಲ 24% ಮಹಿಳೆಯರು ಉದ್ಯೋಗದಲ್ಲಿ ತೊಡಗಿಸಿಕೊಂಡಿದ್ದಾರೆ. ನಮ್ಮ ಪಕ್ಷ ಅಧಿಕಾರಕ್ಕೆ ಬಂದ ನಂತರ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಮಹಿಳೆಯರು ಹೆಚ್ಚು ತೊಡಗಿಸಿಕೊಂಡಿದ್ದಾರೆ. ಅದಕ್ಕಾಗಿಯೇ, ರಾಜ್ಯದಲಿ ಇದೂವರೆಗೆ 4000 ಕೂಸಿನ ಮನೆಗಳನ್ನು ಸ್ಥಾಪಿಸಲಾಗಿದೆ ಎಂದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಗದೇವ ಗುತ್ತೇದಾರ, ನುಖಂಡರಾ ರಾಜಗೋಪಾಲರೆಡ್ಡಿ, ಡಾ ಕಿರಣ್ ದೇಶಮುಖ್, ಪ್ರವೀಣ್ ಹರವಾಳ, ಶಿವು ಹೊನಗುಂಟಿ ಇದ್ದರು.

# ಪೀಠ ಬೇಕೋ, ಚುನಾವಣೆ ಬೇಕೋ?

## ದಿಂಗಾಲೇಶ್ವರ ಶ್ರೀಗೆ ಆಯ್ಕೆ ಮತ್ತು ಎಚ್ಚರಿಕೆ ನೀಡಿದ ಭಕ್ತರು



ಗದಗ: ದಿಂಗಾಲೇಶ್ವರ ಸ್ವಾಮೀಜಿ ಚುನಾವಣೆಗೆ ಸ್ಪರ್ಧಿಸುವ ತಮ್ಮ ನಿರ್ಧಾರವನ್ನು ಮತ್ತೊಮ್ಮೆ ಪರಿಶೀಲಿಸಬೇಕು. ಇಲ್ಲದಿದ್ದರೇ ಪೀಠವನ್ನು ತೊರೆಯುವಂತೆ ಆಯ್ಕೆ ನೀಡಿದ್ದಾರೆ. ಭಕ್ತರು ಏಪ್ರಿಲ್ 18 ರವರೆಗೆ ಸ್ವಾಮೀಜಿಯ ನಿರ್ಧಾರಕ್ಕಾಗಿ ಕಾಯುವುದಾಗಿ ತಿಳಿಸಿದ್ದಾರೆ. ಇಲ್ಲದೇ ಚುನಾವಣೆಯಲ್ಲಿ ಸ್ಪರ್ಧಿಸಲು ಬಯಸಿದರೆ ಶಿರಹಟ್ಟಿ ಫಕೀರೇಶ್ವರ ಮಠವನ್ನು ತೊರೆಯಬೇಕು ಎಂದು ಭಕ್ತರು ತಿಳಿಸಿದ್ದಾರೆ.

ಶಿರಹಟ್ಟಿ ಫಕೀರೇಶ್ವರ ಮಠದ ಪೀಠವು ಕೋಮು ಸೌಹಾರ್ದಕ್ಕೆ ಹೆಸರುವಾಸಿಯಾಗಿದ್ದು, ಸ್ವಾಮೀ-ಜಿಗಳು ರಾಜಕೀಯಕ್ಕೆ ಬರದೆ ಭಕ್ತರಿಗೆ ದಾರಿ ತೋರಿಸಬೇಕು.

ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು ಲಿಂಗಾಯತರಿಗೆ ಅನ್ಯಾಯ ಮಾಡಿದ್ದರೆ ಅದನ್ನು ಪ್ರಜ್ಞಾವಂತರು ಬಹಿರಂಗಪಡಿಸಬೇಕು. ಚುನಾವಣೆಯಲ್ಲಿ ಸ್ಪರ್ಧಿಸುವುದು ಮಠದ ಭಕ್ತ-ರಿಗೂ ಒಳ್ಳೆಯದಲ್ಲ ಎಂದು ಆಗ್ರಹಿಸಿದ್ದಾರೆ.

ಗದಗ, ಲಕ್ಷ್ಮೇಶ್ವರ ಸೇರಿದಂತೆ ವಿವಿಧ ಭಾಗಗಳ ಮಠದ ಗಂಗಣ್ಣ ಮಹಾಂತಶೆಟ್ಟರ, ವೆಂಕನಗೌಡ ಗೋವಿಂದಗೌಡರ ಹಾಗೂ ಇತರ ಭಕ್ತರು ಶುಕ್ರವಾರದಿಂದ ಸರಣಿ ಸಭೆ ನಡೆಸಿ ಏಪ್ರಿಲ್ 18ರವರೆಗೆ ಕಾಯಲು ನಿರ್ಧರಿಸಿದ್ದಾರೆ.

ದಿಂಗಾಲೇಶ್ವರ ಸ್ವಾಮಿಗಳು ಸ್ಪರ್ಧಿಸಲು ಮುಂದಾದರೆ ಬೇರೊಬ್ಬ ಮಠಾಧೀಶರನ್ನು ಆಯ್ಕೆ ಮಾಡುವುದಾಗಿ ಭಕ್ತರು ಎಚ್ಚರಿಸಿದ್ದಾರೆ.

ಚುನಾವಣಾ ಕಣಕ್ಕೆ ಇಳಿದ ಸ್ವಾಮೀಜಿಗೆ ಹೊಸ ಸಂಕಷ್ಟ ಭಕ್ತರ ಈ ನಡೆ ಸ್ವಾಮೀಜಿಯವರಿಗೆ ಆಘಾತ ತಂದಿದೆ. ಆದರೆ ಅವರು ಮನಸ್ಸು ಬದಲಾಯಿಸಿದರೆ ಅವರು ಇನ್ನೂ ಪೀಠದ ಮುಖ್ಯಸ್ಥರಾಗಿ ಮುಂದುವ-ರಿಯಬಹುದು ಎಂದು ಮಠಧ ಭಕ್ತರು ಹೇಳುತ್ತಿದ್ದಾರೆ. "ಶ್ರೀಗಳು ರಾಜಕೀಯ ಪ್ರವೇಶಿಸಿ ಯಾವುದೇ ಒಂದು ಪಕ್ಷದ ಭಾಗವಾಗಬಾರದು. ಅವರು ಸಮುದಾಯದ ಜನರಿಗಾಗಿ ಇದ್ದಾರೆ. ದಿಂಗಾಲೇಶ್ವರ ಸ್ವಾಮೀಜಿಗಳು ಇತರರಿಗೆ ಮಾರ್ಗವನ್ನು ತೋರಿಸಬೇಕು ಮತ್ತು ಮಾದರಿಯಾಗಬೇಕು. ದಿಂಗಾಲೇಶ್ವರ ದರ್ಶಿಗಳಿಗೆ ಇನ್ನೂ ಸಮಯವಿದೆ ಮತ್ತು ಅವರ ನಿರ್ಧಾರವನ್ನು ಮತ್ತೆ ಪರಿಶೀಲಿಸಬೇಕು" ಎಂದು ಹಲವು ಭಕ್ತರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಚುನಾವಣೆಯನ್ನು ಸೇಡು ತೀರಿಸಿಕೊಳ್ಳಲು ಅಥ-'ವಾ ಕೋಪವನ್ನು ವ್ಯಕ್ತಪಡಿಸಲು ಬಳಸಬಾರದು. ಇದು ಪ್ರಜಾಪ್ರಭುತ್ವ. ಸ್ವಾಮೀಜಿ ತಮ್ಮ ನಿರ್ಧಾರವನ್ನು ಮರುಪರಿಶೀಲಿಸಬೇಕು ಅಥ-'ವಾ ನಾವು ಏಪ್ರಿಲ್ 18 ರಂದು ನಿರ್ಧಾರ ತೆಗೆದುಕೊಳ್ಳುತ್ತೇವೆ ಎಂದಿದ್ದಾರೆ. ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ ಮಾತನಾಡಿ, ಮಠಾಧೀಶರು ರಾಜಕೀಯ ಮಾಡದೆ ಧಾರ್ಮಿಕ ವಿಚಾರಗಳ ಬಗ್ಗೆ ಜಾಗೃತಿ ಮೂಡಿಸಬೇಕು. ದಿಂಗಾಲೇಶ್ವರ ಶ್ರೀಗಳು ಸ್ಪರ್ಧಿಸಬೇಕೆಂದರೆ ಕೇಸರಿ ವಸ್ತ್ರ ತೆಗೆದು ಪೀಠ ತೊರೆಯಬೇಕು ಎಂದು ಹೇಳಿದ್ದಾರೆ.

# ವಯನಾಡಿನಲ್ಲಿ ರಾಹುಲ್ ಗಾಂಧಿ ಭರ್ಜರಿ ರೋಡ್ ಶೋ

ವಯನಾಡು: ತಮ್ಮ ಸಂಸದೀಯ ಕ್ಷೇತ್ರ ಕೇರಳದ ವಯನಾಡಿನಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸೋಮವಾರ ಭರ್ಜರಿ ರೋಡ್ ಶೋ ನಡೆಸಿದ್ದಾರೆ.

ಸುಲ್ತಾನ್ ಬತ್ತೇರಿ ಪ್ರದೇಶದಲ್ಲಿ ಕಾರಿನ ಮೇಲೆ ಕುಳಿತು ರಾಹುಲ್ ಗಾಂಧಿ ರೋಡ್ ಶೋ ನಡೆಸಿದ್ದು ರಸ್ತೆಯ ಇಕ್ಕೆಲಗಳಲ್ಲಿ ನೂರಾರು ಕಾರ್ಯಕರ್ತರು ನೆರೆದಿದ್ದರು. ರೋಡ್ ಶೋಗೂ ಮೊದಲು ತಮಿಳುನಾಡಿನ ಗಡಿಭಾಗದ ನೀಲಗಿರಿ ಜಿಲ್ಲೆಗೆ ತೆರಳಿ, ಅಲ್ಲಿನ ಕಲಾ ಮತ್ತು ವಿಜ್ಞಾನ ಕಾಲೇಜಿನಲ್ಲಿ



ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಕೃಷಿಕರೇ ಹೆಚ್ಚಾಗಿರುವ ಮಾನಂದವಾಡಿ, ವೆಲ್ಲಮುಂಡ ಮತ್ತು ಪಡಿಂಜರಥರಾ ಪ್ರದೇಶದಲ್ಲಿ ರೋಡ್ ಶೋ ನಡೆಸಿ ಅಲ್ಲಿ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡುವ ನಿರೀಕ್ಷೆಯಿದೆ. ಜತೆಗೆ ಇತ್ತೀಚೆಗೆ 'ದಿ ಕೇರಳ ಸ್ಟೋರಿ' ಸಿನಿಮಾ ಪ್ರದರ್ಶನದಿಂದ ವಿವಾದಕ್ಕೆ ಕಾರಣವಾಗಿದ್ದ ಮಾನಂದವಾಡಿ ಚರ್ಚ್‌ನ ಬಿಷಪ್ ಅವರನ್ನು ಭೇಟಿಯಾಗಿ ರಾಹುಲ್ ಚರ್ಚಿಸುವ ಸಾಧ್ಯತೆ ಇದೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.

ಚುನಾವಣೆ ಘೋಷಣೆಯಾದ ಬಳಿಕ ಎರಡನೇ ಬಾರಿಗೆ ರಾಹುಲ್ ಕ್ಷೇತ್ರಕ್ಕೆ ಭೇಟಿ ನೀಡಿದ್ದಾರೆ. ರಾಹುಲ್ ಹೆಲಿಕಾಪ್ಟರ್ ತಪಾಸಣೆ ಮಾಡಿದ ಚುನಾವಣಾ ಅಧಿಕಾರಿಗಳು ತಮಿಳುನಾಡಿನಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಹೆಲಿಕಾಪ್ಟರ್‌ಅನ್ನು ಚುನಾವಣಾ ಅಧಿಕಾರಿಗಳು ಸೋಮವಾರ ತಪಾಸಣೆ ನಡೆಸಿದರು.

ಕೇರಳದ ವಯನಾಡ್‌ಗೆ ತೆರಳುವ ಮುನ್ನ ನೀಲಗಿರಿಗೆ ತೆರಳಲು ಹೆಲಿಕಾಪ್ಟರ್ ಲ್ಯಾಂಡ್ ಮಾಡಿದ್ದರು. ರಾಹುಲ್ ಗಾಂಧಿ ಹೆಲಿಕಾಪ್ಟರ್‌ನಿಂದ ಇಳಿದ ನಂತರ ಫ್ಲೈಯಿಂಗ್ ಸ್ಕ್ವಾಡ್ ಅಧಿಕಾ-ರಿಗಳು ಶೋಧ ನಡೆಸಿದರು ಎಂದು ಪೊಲೀಸರು ತಿಳಿಸಿದ್ದಾರೆ.

# ಬಳ್ಳಾರಿ (ಪ.ಪಂ) ಲೋಕಸಭಾ ಸಾರ್ವತ್ರಿಕ ಚುನಾವಣೆ: ಒಂದು ನಾಮಪತ್ರ ಸಲ್ಲಿಕೆ




ಬಳ್ಳಾರಿ: 09-ಬಳ್ಳಾರಿ (ಪ.ಪಂ) ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ರ ಅಂಗವಾಗಿ ಸೋಮವಾರದಂದು ಕೆ.ಆರ್.ಎಸ್ ಪಕ್ಷದ ಅಭ್ಯರ್ಥಿಯಾಗಿ ಸಿ.ಚನ್ನವೀರ ಅವರು ಜಿಲ್ಲಾ ಚುನಾವಣಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರಿಗೆ ನಾಮಪತ್ರ ಸಲ್ಲಿಸಿದರು.

ಚುನಾವಣೆಗೆ ಅಧಿಸೂಚನೆ ಪ್ರಕಟವಾದ ಏ. 12 ರಂದು ನಾಲ್ವರು ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದರು. ಏ.15 ಸೋಮವಾರದಂದು ಓರ್ವ ಅಭ್ಯರ್ಥಿಯಿಂದ ನಾಮಪತ್ರ ಸಲ್ಲಿಕೆಯಾಗಿದ್ದು, ಇದುವರೆಗೆ ಐವರು ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದಂತಾಗಿದೆ.

ನಾಮಪತ್ರ ಸಲ್ಲಿಸಲು ಏಪ್ರಿಲ್ 19 ಕೊನೆ ದಿನವಾಗಿದ್ದು, ಏಪ್ರಿಲ್ 20 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಏಪ್ರಿಲ್ 22 ರಂದು ನಾಮಪತ್ರ ವಾಪಸ್ಸು ಪಡೆಯಲು ಕೊನೆಯ ದಿನವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# ಮಹಿಳೆ ನಾಪತ್ತೆ



ಬೆಳಗಾವಿ: ಬೆಳಗಾವಿ ಜಿಲ್ಲೆಯ ಮೂಡಲಗಿ ತಾಲೂಕಿನ ಹೊಸಯರಗುದ್ರಿ ಗ್ರಾಮದ ಸಂಗೀತಾ ಭರಮಣ್ಣಾ ನಾಯಕ ಎಂಬ ಮಹಿಳೆಯು ಏ.06 ರಂದು ತವರು ಮನೆಗೆ ಹೋಗಿ ಬರುತ್ತೇನೆ ಎಂದು ಹೇಳಿ ಹೋದವಳು ಎಲ್ಲಿಯೋ ಹೋಗಿ ಕಾಣೆಯಾಗಿರುತ್ತಾಳೆ ಎಂದು ಪತಿ ಭರಮಣ್ಣಾ ರಂಗಣ್ಣ ನಾಯಕ ಅವರು ಕುಲಗೋಡ ಪೊಲೀಸ್ ಠಾನೆಗೆ ಹಾಜರಾಗಿ ದೂರ ದಾಖಲಿಸಿದ್ದಾರೆ.

ಮಹಿಳೆಯ ಚಹರೆ: ವಯಸ್ಸು 24 ವರ್ಷ, ಎತ್ತರ 4,8, ಮೈ ಕಟ್ಟು ಮೈಯಿಂದ ಸದೃಢ, ಮೈ ಬಣ್ಣ ಗೋದಿಗೆಂಪು, ಉದ್ದ ಮುಖ, ಕಪ್ಪು ಕೂದಲು, ನೀಲಿ ಕಲರ್ ಸೀರೆ ದರಿಸಿರುತ್ತಾಳೆ.

ಸದರಿ ಮಹಿಳೆಯ ಕುರಿತು ಮಾಹಿತಿ ದೊರೆತಲ್ಲಿ ಕುಲಗೋಡ ಪೊಲೀಸ್ ಠಾಣೆಯ ದೂ. 0833-422233 ಸಂಖ್ಯೆಗೆ ಸಂಪರ್ಕಿಸಬೇಕು ಎಂದು ಕುಲಗೋಡ ಪೊಲೀಸ್ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ವಾರ್ಡಗಳಲ್ಲಿ ಮತದಾನ ಜಾಗೃತಿ




ಬಳ್ಳಾರಿ: ಸುಭದ್ರ ಪ್ರಜಾಪ್ರಭುತ್ವ ಆಯ್ಕೆಗೆ ಅರ್ಹ ಮತದಾರರೆಲ್ಲರಿಗೂ ಸ್ಥಾನಮಾನವಿದ್ದು, ಲೋಕಸಭಾ ಚುನಾವಣೆಯಲ್ಲಿ ತಮ್ಮ ಮತದಾನ ಹಕ್ಕನ್ನು ಚಾಚೂ ತಪ್ಪದೇ ಚಲಾಯಿಸಬೇಕು ಎಂದು ಮಹಾನಗರ ಪಾಲಿಕೆಯ ಯೋಜನಾ ವ್ಯವಸ್ಥಾಪಕ ದೇವರಾಜ ಅವರು ಹೇಳಿದರು.

94-ಬಳ್ಳಾರಿ ನಗರ ಕ್ಷೇತ್ರ ವ್ಯಾಪ್ತಿಯ ಬಳ್ಳಾರಿ ಮಹಾನಗರ ಪಾಲಿಕೆಯ ವಾರ್ಡ್ ಸಂಖ್ಯೆ 19 ರ ವ್ಯಾಪ್ತಿಯ ಮಹಾನಂದಿ ಕೊಟ್ಟಂ, ಕನ್ನಡ ನಗರ ಹಾಗೂ ವಾರ್ಡ್ ಸಂಖ್ಯೆ 20 ರ ಗಣೇಶ ಕಾಲೋನಿ, ರಾಯಲ್ ಕಾಲೋನಿ, ಸಿದ್ದುಕಿ ಕಾಲೋನಿ ಮತ್ತು ನಿಜಲಿಂಗಪ್ಪ ಕಾಲೋನಿಗಳಲ್ಲಿ ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮತದಾನದ ಹಕ್ಕು ಸಂವಿಧಾನಾತ್ಮಕವಾಗಿ 18 ವರ್ಷ ಮೇಲ್ಪಟ್ಟ ಎಲ್ಲರಿಗೂ ದೊರೆತಿದೆ. ಪ್ರತಿನಿಧಿಗಳನ್ನು ಚುನಾವಣೆಗಳ ಮೂಲಕ ಆಯ್ಕೆ ಮಾಡುವಾಗ ಮತವನ್ನು ಹಣ ಅಥವಾ ಬೇರೆ ಯಾವುದೇ ಆಮಿಷಕ್ಕೆ ಒಳಗಾಗದೇ ಮತವನ್ನು ಮಾರಿಕೊಳ್ಳದೇ ನೈತಿಕವಾಗಿ ಮತದಾನ ಮಾಡಬೇಕು ಎಂದರು.

ಪ್ರತಿಯೊಬ್ಬರೂ ಚುನಾವಣೆ ಪ್ರಕ್ರಿಯೆಯಲ್ಲಿ ಪಾಲುದಾರರಾಗಬೇಕು. ಹೀಗಾಗಿ, ನಗರದ ಹಲವು ಕಡೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದು, ಈ ಬಾರಿ ಪೂರ್ಣ ಪ್ರಮಾಣದಲ್ಲಿ ಮತದಾನ ನಡೆಯುವ ಗುರಿ ಇಟ್ಟಿಕೊಳ್ಳಲಾಗಿದೆ ಎಂದು ತಿಳಿಸಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗಟ್ಟಿಗೊಳಿಸಬೇಕಾದರೆ ಪ್ರತಿಯೊಬ್ಬರು ಕಡ್ಡಾಯವಾಗಿ ಮತದಾನ ಮಾಡುವುದು ಅತ್ಯಗತ್ಯವಾಗಿದೆ. ಲೋಕಸಭಾ ಚುನಾವಣೆಯಲ್ಲಿ ಮತದಾನ ಪ್ರಮಾಣ ಹೆಚ್ಚಿಸಲು ಸಾಕಷ್ಟು ಜನ ಜಾಗೃತಿ ಹಮ್ಮಿಕೊಂಡಿದ್ದು, ಮತದಾನದ ಹಬ್ಬದಲ್ಲಿ ಎಲ್ಲರೂ ಪಾಲ್ಗೊಳ್ಳಬೇಕು ಎಂದು ತಿಳಿಸಿದರು.

ಪಾಲಿಕೆಯ ತ್ಯಾಜ್ಯ ಸಂಗ್ರಹಿಸುವ ವಾಹನಗಳಲ್ಲಿ ಮತದಾನದ ಜಾಗೃತಿ ಗೀತೆ ಪ್ರಸಾರವಾಗುತ್ತಿದೆ. ಇದರ ಜೊತೆಗೆ ಮತದಾನ ಜಾಗೃತಿ ಕುರಿತ ವಿವಿಧ ಗೀತೆಗಳನ್ನು ಪ್ರಸಾರ ಮಾಡಲಾಗುವುದು.

ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಎಲ್ಲಾ ಕಡೆ ಮತದಾನದ ಬಗ್ಗೆ ಜಾಗೃತಿ ಮೂಡಿಸುವ ಬ್ಯಾನರ್ಗಳನ್ನು ಹಾಕಲಾಗಿದೆ. ಮತದಾನ ಪ್ರಮಾಣ ಹೆಚ್ಚಳಕ್ಕೆ ನಗರದ ವಿವಿಧೆಡೆ ಮತದಾನ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ವಲಯ ಆಯುಕ್ತ ಗುರುರಾಜ ಸವದಿ, ಪಾಲಿಕೆಯ ಪರಿಸರ ಅಭಿಯಂತರರಾದ ಕಿರಣ್, ಹರ್ಷವರ್ಧನ ಸೇ-ರಿದಂತೆ ಕಂದಾಯ, ತಾಂತ್ರಿಕ ಮತ್ತು ಆರೋಗ್ಯ ಶಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು, ಮತ್ತೀತರರು ಹಾಜರಿದ್ದರು.

# ದೇಶ ಕಟ್ಟುವ ಕೆಲಸ ಕಾಂಗ್ರೆಸ್ ಪಕ್ಷ ಮಾಡಿದೆ: ಪ್ರಿಯಂಕಾ ಜಾರಕಿಹೊಳಿ

ಹುಕ್ಕೇರಿ: 1885ರಲ್ಲಿ ಅಸ್ತಿತ್ವಕ್ಕೆ ಬಂದ ಕಾಂಗ್ರೆಸ್ ಪಕ್ಷವು ನೆಹರು, ಇಂದಿರಾ ಗಾಂಧಿ, ರಾಜೀವ್ ಗಾಂಧಿ ಸೇರಿದಂತೆ ಡಾ. ಮನ ಮೋಹನ್ ಸಿಂಗ್ ಅವಧಿಯವರೆಗೂ ದೇಶದ ಜನರ ಅಭಿವೃದ್ಧಿಗಾಗಿ ನೂರಾರು ಯೋಜನೆಗಳನ್ನು ರೂಪಿಸಿ ದೇಶ ಕಟ್ಟುವ ಕೆಲಸವನ್ನು ಪಕ್ಷ ಮಾಡಿದೆ ಎಂದು ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ಹೇಳಿದರು.

ಯಮಕನಮರಡಿ ಮತಕ್ಷೇತ್ರದ ಮೋದಗಾ, ಶೆಟ್ಟಿಹಳ್ಳಿ, ಧೋಂಡಗಟ್ಟಿ, ಬೆಳ್ಳಂಕಿ ಹಾಗೂ ಖವನೆವಾಡಿ ಗ್ರಾಮದಲ್ಲಿ ಮತಯಾಚಿಸಿ, ಪ್ರಚಾರ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಸ್ವಾತಂತ್ರ್ಯ ಪೂರ್ವದಿಂದಲೂ ಕಾಂಗ್ರೆಸ್ ಪಕ್ಷ ದೇಶಕ್ಕೆ ಅನೇಕ ಕೊಡುಗೆಗಳನ್ನು ನೀಡಿದೆ. ಅದಕ್ಕಾಗಿ ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ



ಅಧಿಕೃತ ಅಭ್ಯರ್ಥಿಯಾದ ನನ್ನನ್ನು ಬೆಂಬಲಿಸುವ ಮೂಲಕ ಕಾಂಗ್ರೆಸ್ ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರಬೇಕೆಂದು ಮನವಿ ಮಾಡಿದರು.

ಪಂಚವಾರ್ಷಿಕ ಯೋಜನೆ, ವಿದೇಶಾಂಗ ನೀತಿ, ಇಂದಿರಾ ಗಾಂಧಿ ಅವರು ದೇಶದ ಜನರು ಬಡತನದಿಂದ ಹೊರಬರಬೇಕೆಂದು ರೂಪಿಸಿದ 20 ಅಂಶಗಳ ಕಾರ್ಯಕ್ರಮ, ರಾಜೀವ್ ಗಾಂಧಿ ವಿಜ್ಞಾನ, ತಂತ್ರಜ್ಞಾನ ಕ್ಷೆ?ತ್ರಕ್ಕೆ ನೀಡಿದ ಕೊಡುಗೆ ಅನನ್ಯವಾಗಿದೆ. ಇನ್ನು ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಪ್ರಣಾಳಿಕೆಯಲ್ಲಿ ನೀಡಿದ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ ನುಡಿದಂತೆ ನಡೆದಿದ್ದಾರೆ. ಆದ್ದರಿಂದ ಜನತೆಯ ಹಿತ ಕಾಪಾಡುವ ಕಾಂಗ್ರೆಸ್ ಪಕ್ಷವನ್ನೆ ಅಧಿಕಾರಕ್ಕೆ ತರಬೇಕೆಂದು ವಿನಂತಿಸಿದರು.

ಇದೇ ವೇಳೆ ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಮಹಿಳೆಯರು ಸತ್ಕರಿಸಿದರು. ಈ ಸಂದರ್ಭದಲ್ಲಿ ಯಶ್ವಂತ್ ಬಾಗಡಿ, ಸಲಾಮವಾಡಿ ಗ್ರಾಮ ಪಂಚಾಯಿತಿ ಅಧ್ಯಕ್ಷರು ಸ್ಮಿತಾ ಕೊಕಿತ್ಕಲ್, ಶರದ್ ಪಾಟೀಲ್, ಪಿಂಟು ವಡ್ಡರ್, ವಿಠ್ಠಲ್ ಗುರವ, ವಂದನಾ ಕಳವಿಕಟ್ಟಿ, ರತನಪ್ಪ ಕುಂಬಾರ್, ಗ್ರಾಮ ಪಂಚಾಯತಿ ಉಪಾಧ್ಯಕ್ಷರು ದಯಾನಂದ್ ಸಿಂಧೆ, ಸಂಜಯ್ ಪಾಟೀಲ್, ವಿಠ್ಠಲ್ ಕುಂಬಾರ್, ಕಲ್ಪನಾ ಕುರಾಡೆ, ಬ್ಲಾಕ್ ಅಧ್ಯಕ್ಷರು ಮಾಂತೇಶ್ ಮಗದುಮ್, ಸಚಿವರ ಆಪ್ತ ಸಹಾಯಕ ದಯಾನಂದ್ ಪಾಟೀಲ್ ಸೇರಿದಂತೆ ಯಮಕನಮರಡಿ ಮತಕ್ಷೇತ್ರದ ಮೋದಗಾ, ಶೆಟ್ಟಿಹಳ್ಳಿ, ಧೋಂಡಗಟ್ಟಿ, ಬೆಳ್ಳಂಕಿ ಹಾಗೂ ಖವನೆವಾಡಿ ಗ್ರಾಮದ ಕಾಂಗ್ರೆಸ್ ಪಕ್ಷದ ಮುಖಂಡರು, ಹಿರಿಯರು, ಮಹಿಳೆಯರು ಸೇ-ರಿದಂತೆ ಅಪಾರ ಸಂಖ್ಯೆಯ ಯುವಕರು ಪಾಲ್ಗೊಂಡಿದ್ದರು.

# ಗ್ಯಾರಂಟಿ ಯೋಜನೆಗಳಿಂದಲೇ ಕಾಂಗ್ರೆಸ್ ಪಕ್ಷ ಗೆಲ್ಲುವುದು ಗ್ಯಾರಂಟಿ: ಸಚಿವ ಸತೀಶ್ ಜಾರಕಿಹೊಳಿ

ಬಿಜೆಪಿಯ ಸುಳ್ಳು ಭರವಸೆಗಳ ಬಗ್ಗೆ ಮತದಾರರಿಗೆ ಸ್ಪಷ್ಟನೆ ನೀಡಿ-ರಾಜ್ಯ ಸರ್ಕಾರ ಶಿಕ್ಷಣ, ವಸತಿ ಸೌಕರ್ಯಕ್ಕೆ ಆದ್ಯತೆ ನೀಡುತ್ತಿದೆ

ಚಿತ್ರದುರ್ಗ: ಕರ್ನಾಟಕದಲ್ಲಿ ಎರಡು ಹಂತದಲ್ಲಿ ಲೋಕಸಭಾ ಚುನಾವಣೆ ನಡೆಯಲಿದ್ದು, ಕಳೆದ ವರ್ಷದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ನೀಡಿದ ಗ್ಯಾರಂಟಿಗಳ ಗ್ಯಾರಂಟಿ ಅನುಷ್ಠಾನದಿಂದ ಲೋಕಸಭಾ ಚುನಾವಣೆಯಲ್ಲೂ ಅತಿಹೆಚ್ಚು ಸ್ಥಾನಗಳಿಸುವುದು ನಮಗೆ ಗ್ಯಾರಂಟಿಯಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದರು.

ನಗರದ ಗುರುರಾಘವೇಂದ್ರ ಕಲ್ಯಾಣ ಮಂಟಪದಲ್ಲಿ ಕಾಂಗ್ರೆಸ್ ಪಕ್ಷ ಆಯೋಜಿಸಿದ್ದ ಲೋಕಸಭಾ ಚುನಾವಣೆಯ ಪ್ರಚಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳ ಫಲವಾಗಿ ಲಕ್ಷಾಂತರ ಬಡ ಕುಟುಂಬಗಳು ನೆಮ್ಮದಿಯಿಂದ ನೆಲೆಸಿದ್ದು, ರಾಷ್ಟ್ರದ ಇತಿಹಾಸದಲ್ಲೇ ಮಹತ್ವದ ಐದು ಗ್ಯಾರಂಟಿಗಳನ್ನು ಯಾರೂ ಘೋಷಣೆ ಮಾಡಿಲ್ಲ, ಗ್ಯಾರಂಟಿ ಯೋಜನೆಗಳ ಘೋಷಣೆ ಮತ್ತು ಅನುಷ್ಠಾನ ಎರಡೂ ಪ್ರಮುಖವಾಗಿದೆ. ಇದು ಕಾಂಗ್ರೆಸ್ ಪಕ್ಷದ ವಿಜಯಕ್ಕೆ ನಾಂದಿಯಾಗಿದೆ. ಲೋಕಸಭಾ ಚುನಾವಣೆಯಲ್ಲಿ ಯಾವುದೇ ಕ್ಷೇತ್ರದಲ್ಲೂ



ಕಾಂಗ್ರೆಸ್‌ಗೆ ಹಿನ್ನೆಡೆಯಾಗಲು ಸಾಧ್ಯವಿಲ್ಲದ ವಾತಾವರಣ ಉಂಟಾಗಿದೆ. ಪಕ್ಷದ ಮುಖಂಡರು, ಕಾರ್ಯಕರ್ತರು ಗ್ಯಾರಂಟಿ ಯೋಜನೆಯಿಂದ ಆಗಿರುವ ಪ್ರಯೋಜನದ ಬಗ್ಗೆ ಮತದಾರರನ್ನು ಜಾಗೃತಿಗೊಳಿಸಬೇಕು. ಬಿಜೆಪಿಯ ಸುಳ್ಳು ಭರವಸೆಗಳ ಬಗ್ಗೆ ಮತದಾರರಿಗೆ ಸ್ಪಷ್ಟನೆ ನೀಡಬೇಕು.

ಕಾಂಗ್ರೆಸ್ ಪಕ್ಷದ ಆಡಳಿತದಿಂದ ಮಾತ್ರ ಬಡವರ ಹಿತರಕ್ಷಣೆ ಬಗ್ಗೆ ಜನರಲ್ಲಿ ವಿಶ್ವಾಸ ಮೂಡಿಸಬೇಕು. ಆಗಾದಲ್ಲಿ ಮಾತ್ರ ಈ ಚುನಾವಣೆಯಲ್ಲಿ ಹೆಚ್ಚು ಸ್ಥಾನಗಳಿಸಲು ಸಾಧ್ಯವಾಗುತ್ತದೆ ಎಂದರು.

ರಾಜ್ಯ ಸರ್ಕಾರ ಶಿಕ್ಷಣ ಮತ್ತು ವಸತಿ ಸೌಕರ್ಯಕ್ಕೆ ಆದ್ಯತೆ ನೀಡುತ್ತಿದೆ. ಬಿಜೆಪಿ ನಾಲ್ಕು ವರ್ಷಗಳ ಆಡಳಿತದಲ್ಲಿ ಒಂದು ಶಾಲೆ ನಿರ್ಮಾಣವಾಗಲಿಲ್ಲ.

ಮುಖ್ಯಮಂತ್ರಿ ಸಿದ್ದರಾಮಯ್ಯ 13 ಲಕ್ಷ ಮನೆ ನಿರ್ಮಾಣದ ಗುರಿ ನೀಡಿದ್ದು, ಈ ಪೈಕಿ 5 ಲಕ್ಷ ಮನೆಗಳನ್ನು ವಿತರಣೆ ಮಾಡಲಾಗಿದೆ. 3 ಲಕ್ಷ ಮನೆಗಳು ನಿರ್ಮಾಣದ ಹಂತದಲ್ಲಿವೆ. ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಮುಖಂಡರು ಪ್ರತಿ ಮನೆ, ಮತದಾರರ ಭೇಟಿಯಾಗಬೇಕು.

ಈ ಬಾರಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಬೇಕೆಂದು ವಿನಂತಿ ಮಾಡಬೇಕಿದೆ. ಸಾರ್ವಜನಿಕರಲ್ಲಿ ಈಗಾಗಲೇ ಪ್ರಸ್ತುತ ಸರ್ಕಾರದ ಗ್ಯಾರಂಟಿ ಯೋಜನೆಗಳ ಬಗ್ಗೆ ಹೆಚ್ಚು ಆತ್ಮವಿಶ್ವಾಸವಿದ್ದು, ಕಾಂಗ್ರೆಸ್ ಪಕ್ಷವನ್ನು ಆಶೀರ್ವಾದಿಸಲು ಅವರು ಹಿಂದೆ, ಮುಂದೆ ನೋಡಲ್ಲ, ಇಂದಿನ ಜನಸ್ತೋಮವನ್ನು ನೋಡಿದರೆ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಗೆಲುವಿನತ್ತ ಹೆಜ್ಜೆ ಇಟ್ಟಿದ್ದಾರೆ ಎಂದರು.

## ಸಾರ್ವಜನಿಕರ ಮಾಹಿತಿಗಾಗಿ ಅಧಿಕೃತ ಪಟ್ಟಿ ಪ್ರಕಟಣೆ

ಬೆಳಗಾವಿ: ಸಾರ್ವಜನಿಕರಿಗೆ ತಮ್ಮ ಮಕ್ಕಳ ದಾಖಲಾತಿ ಕುರಿತು ಅನುಕೂಲವಾಗುವ ದೃಷ್ಟಿಯಿಂದ ನಗರ ವಲಯದ ಅಧಿಕೃತ ಶಾಲೆಗಳ ಪಟ್ಟಿಯನ್ನು ಕಚೇರಿಯಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲಾಗಿದೆ. ಆದರಿಂದ ಸಾರ್ವಜನಿಕರು ತಮ್ಮ ಮಕ್ಕಳಗಳನ್ನು ಶಾಲೆಯಲ್ಲಿ ದಾಖಲಾತಿ ಮಾಡುವ ಪೂರ್ವದಲ್ಲಿ ಅಧಿಕೃತ ಶಾಲೆಗಳಲ್ಲಿ ಮಾತ್ರ ದಾಖಲಾತಿ ಮಾಡಬೇಕಾಗಿರುತ್ತದೆ.

ಕರ್ನಾಟಕ ಶಿಕ್ಷಣ ಮಸೂದೆ 1983 ರಡಿ ರಚಿತವಾದ ಕಾಯ್ದೆಗಳನ್ವಯ ಖಾಸಗಿ ಶಿಕ್ಷಣ ಸಂಸ್ಥೆಗಳು ಕಡ್ಡಾಯವಾಗಿ ನೊಂದಣಿ ಮತ್ತು ಮಾನ್ಯತೆ ಪಡೆದು ಶಾಲೆಗಳನ್ನು ನಡೆಸಬೇಕಾಗಿರುತ್ತದೆ. ಅದರಂತೆ ಇಲಾಖೆಯು ಪ್ರತಿ ವರ್ಷವೂ ಹೊಸ ಖಾಸಗಿ ಶಾಲೆಗಳನ್ನು ಪ್ರಾರಂಭಿಸಲು ಅರ್ಜಿಗಳನ್ನು ಆಹ್ವಾನಿಸಿ, ನಿಯಮಾನುಸಾರ ಪರಿಶಿಲಿಸಿ ಮಾನದಂಡಗಳನ್ನು ಪೂರೈಸಿದ ಅರ್ಹ ಶಾಲೆಗಳಿಗೆ ಅನಯಮತಿಯನ್ನು ನೀಡಲಾಗುತ್ತಿದೆ.

ಅದರಂತೆ 2024-25 ನೇ ಸಾಲಿನಲ್ಲಿ ಹೊಸದಾಗಿ ಶಾಲೆ ಪ್ರಾರಂಭಿಸಲು ಸಲ್ಲಿಸಿದ ಅರ್ಜಿಗಳನ್ನು ಪರಿಶೀಲಿಸಿ ನಿಗಸಿಪಡಿಸಿದ ಅಂತಿಮ ದಿನಾಂಕದೊಳಗೆ ಅನುಮತಿ ನೀಡಲು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಕ್ರಮ ವಹಿಸಲಾಗುತ್ತಿದೆ ಎಂದು ನಗರ ವಲಯದ ಕ್ಷೇತ್ರ ಶಿಕ್ಷಣ ಅಧಿಕಾರಿಗಳಾದ ಎಲ್. ಎಸ್.ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಏ.16 ರಂದು ಮತದಾರರಿಗೆ ಮತದಾನದ ಜಾಗೃತಿ ಜಾಥಾ

ಬೆಳಗಾವಿ: ಸಾರ್ವತ್ರಿಕ ಲೋಕ ಸಭಾ ಚುನಾವಣೆ 2024ರ ಅಂಗವಾಗಿ ಜಿಲ್ಲಾಡಳಿತ, ಮತ್ತು ಜಿಲ್ಲಾ ಪಂಚಾಯತ್ ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಕ್ರಾಂತಿವೀರ ಸಂಗೊಳ್ಳಿರಾಯಣ್ಣ ಶಿಕ್ಷಣ ಮಾಹಾವಿದ್ಯಾಲಯ ವತಿಯಿಂದ ಏ.16 ರಂದು ಬೆಳಗ್ಗೆ 10 ಗಂಟೆಗೆ ಮತದಾರರಿಗೆ ಮತದಾನ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿದೆ.

ಮತದಾನ ಜಾಗೃತಿ ಜಾಥಾವು ದುರ್ಗಾದೇವಿ ದೇವಸ್ಥಾನದಿಂದ ಕೇಂದ್ರ ಬಸ್ ನಿಲ್ದಾಣ, ಖಡೇ ಬಜಾರ್, ಶನಿವಾರ ಕೂಟ ರಸ್ತೆ, ಕಾಕತಿವೇಸ್ ರಸ್ತೆ, ಚನ್ನಮ್ಮ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸುವ ಮೂಲಕ ಆಚರಿಸಲಾಗುವುದು ಎಂದು ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವಿಪ್ ಸಮಿತಿ ಹಾಗೂ ಮೂಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಮಾನ್ಯ ಪ್ರವೇಶ ಪರೀಕ್ಷೆ(ಸಿಇಟಿ): ನಿಷೇಧಾಜ್ಞೆ ಆದೇಶ

ಬೆಳಗಾವಿ: ಸಾಮಾನ್ಯ ಪ್ರವೇಶ ಪರೀಕ್ಷೆಯು (ಸಿಇಟಿ) ಏ.18 ಮತ್ತು 19 ರಂದು ಬೆಳಗ್ಗೆ 10:30 ರಿಂದ 11:50 ರವರೆಗೆ ಹಾಗೂ ಮಧ್ಯಾಹ್ನ 2:30 ರಿಂದ 3:50ರ ವರಗೆ ಮತ್ತು ಏ. 20 ರಂದು ಬೆಳಗ್ಗೆ 11:30 ರಿಂದ 12:30 ರವರೆಗೆ ಸಾಮಾನ್ಯ ಪರೀಕ್ಷೆಯು ಜರುಗಲಿವೆ.

ಪರೀಕ್ಷೆಗಳ ಸಮಯದಲ್ಲಿ ಯಾವುದೇ ರೀತಿಯ ಲೋಪದೋಷಗಳಾಗದಂತೆ ಹಾಗೂ ಯಾವುದೇ ರೀತಿಯ ಅವ್ಯವಹಾರಗಳು ಜರುಗದಂತೆ ಕಟ್ಟುನಿಟಿನ ಕ್ರಮ ಜರುಗಿಸುವ ಸಲುವಾಗಿ ಮತ್ತು ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಹಿತ ದೃಷ್ಟಿಯಿಂದ ಪರೀಕ್ಷಾ ಕೇಂದ್ರಗಳ 200ಮೀ. ವ್ಯಾಪ್ತಿಯ ಸುತ್ತಮುತ್ತ ಸಿ.ಆರ್.ಪಿ.ಸಿ 1973 ಕಲಂ 144ರ ಅಡಿಯಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಲಾಗಿರುತ್ತದೆ. ಒಂದು ವೇಳೆ ಆದೇಶವನ್ನು ಉಲಂಘಿಸಿದಲ್ಲಿ ಅಂತವರ ವಿರುದ್ಧ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾ ದಂಡಾಧಿಕಾರಿಗಳಾದ ನಿತೇಶ್ ಪಾಟೀಲ ಅವರು ಆದೇಶದಲ್ಲಿ ತಿಳಿಸಿದ್ದಾರೆ.

## ಏ.18 ರಂದು ಮತದಾನ ಪ್ರಮಾಣವನ್ನು ಹೆಚ್ಚಿಸುವ ನಿಮಿತ್ಯ ಕ್ರಿಕೆಟ್ ಪಂದ್ಯಾವಳಿ

ಬೆಳಗಾವಿ: ಲೋಕಸಭಾ ಚುನಾವಣೆ-2024ರ ಪ್ರಯುಕ್ತ ಮತದಾನ ಪ್ರಮಾಣವನ್ನು ಹೆಚ್ಚಿಸುವುದಕ್ಕಾಗಿ ಹಾಗೂ ಯುವ ಮತದಾರರಿಗೆ ಮತದಾನದ ಜವಬ್ದಾರಿ ಮತ್ತು ಹೊಣೆಗಾರಿಕೆ ಬಗ್ಗೆ ಅರಿವು ಮೂಡಿಸಲು ಬೆಳಗಾವಿ ತಾಲೂಕಿನ ಯುವ ಮತದಾರರಿಗೆ ಕ್ರಿಕೆಟ್ ಪಂದ್ಯಾವಳಿ ಆಯೋಜನೆ ಮಾಡಲಾಗಿದೆ.

ಸದರಿ ಕ್ರಿಕೆಟ್ ಪಂದ್ಯಾವಳಿಯು ದಿನಾಂಕ; 18/04/2024 ರಂದು ಸಂತಿಬಸ್ತವಾಡದ ಗ್ರಾಮದ ಕ್ರಿಕೆಟ್ ಮೈದಾನದಲ್ಲಿ ನಡೆಯಲಿದ್ದು, 18 ವರ್ಷ ಮೇಲ್ಪಟ್ಟ ಮೊದಲನೆ ಬಾರಿ ಮತದಾನ ಮಾಡುತ್ತಿರುವ ಯುವ ಮತದಾರರು ಈ ಪಂದ್ಯಾವಳಿಯಲ್ಲಿ ಭಾಗವಹಿಸಲು ಹೆಸರನ್ನು ದಿನಾಂಕ: 17/04/2024 ರ ಸಂಜೆ 5 ಗಂಟೆಯೊಳಗೆ ನೊಂದಾಯಿಸಿ ಕೊಳ್ಳಬಹುದು.

ಹೆಸರನ್ನು ನೋಂದಾಯಿಸಲು ಕಡ್ಡಾಯವಾಗಿ ತಮ್ಮ ಎಪಿಕ್ ನಂ ನೀಡುವುದು. ಇದು ತಾಲೂಕು ಮಟ್ಟದ ಪಂದ್ಯಾವಳಿಯಾಗಿದ್ದು, ಇದರಲ್ಲಿ ಗೆದ್ದ ತಂಡವನ್ನು ವಿಭಾಗ ಮಟ್ಟಕ್ಕೆ ಮತ್ತು ವಿಭಾಗ ಮಟ್ಟದಲ್ಲಿ ಗೆದ್ದ ತಂಡವನ್ನು ಜಿಲ್ಲಾ ಮಟ್ಟಕ್ಕೆ ಆಯ್ಕೆ ಮಾಡಿ ಕಳುಹಿಸಲಾಗುವುದು.

ಹೆಸರು ಅಥವಾ ತಂಡವನ್ನು ನೊಂದಾಯಿಸಲು ಅಥವಾ ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9844080407, 8105184384 ಯನ್ನು ಸಂಪರ್ಕಿಸಬಹುದು ಎಂದು ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ತಾಲೂಕಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಮಪತ್ರ ಸಲ್ಲಿಕೆಗೂ ಮುನ್ನ ಮನೆಯಲ್ಲಿ ಮೃಣಾಲ್ ಹೆಬ್ಬಾಳ್ಕರ್ ಗೋಪೂಜೆ

## ಮನೆಯಲ್ಲಿ ವಿವಿಧ ಮಠಾಧೀಶರ ಪಾದಪೂಜೆ ಮಾಡಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪುತ್ರ





ಬೆಳಗಾವಿ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಅವರ ಪುತ್ರ, ಹಾಗೂ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ನಾಮಪತ್ರ ಸಲ್ಲಿಕೆಗೂ ಮುನ್ನ ಕುವೆಂಪು ನಗರದ ನಿವಾಸದಲ್ಲಿ ಗೋಪೂಜೆ ನೆರವೇರಿಸಿದರು. ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹಾಗೂ ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ, ಮೃಣಾಲ್ ಹೆಬ್ಬಾಳ್ಕರ್ ಅವರ ಪತ್ನಿ ಹಿತಾ ಹೆಬ್ಬಾಳ್ಕರ್ ಗೋಪೂಜೆಯಲ್ಲಿ ಭಾಗವಹಿಸಿದರು.

**ಮನೆಗೆ ವಿವಿಧ ಮಠಾಧೀಶರು ಭೇಟಿ:** ಗೋಪೂಜೆ ಬಳಿಕ ವಿವಿಧ ಮಠಾಧೀಶರು ಸಚಿವರ ನಿವಾಸಕ್ಕೆ ಆಗಮಿಸಿ ಆಶೀರ್ವದಿಸಿದರು. ಕೂಡಲ ಸಂಗಮದ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ, ಹುಕ್ಕೇರಿ ಹೀರೆಮಠದ ಚಂದ್ರಶೇಖರ್ ಶಿವಾಚಾರ್ಯ ಸ್ವಾಮೀಜಿ, ಕಾರಂಜಿ ಮಠದ ಗುರುಸಿದ್ದ ಸ್ವಾಮೀಜಿ ಸೇರಿದಂತೆ 20ಕ್ಕೂ ಹೆಚ್ಚು ಮಠಾಧೀಶರು ಆಶೀರ್ವದಿಸಿದರು.

**2 ಲಕ್ಷ ಮತಗಳ ಅಂತರದಿಂದ ಗೆಲುವು:** ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಎರಡು ಲಕ್ಷಕ್ಕೂ ಅಧಿಕ ಮತಗಳ ಅಂತರದಿಂದ ಗೆಲುವು ಸಾಧಿಸಲಿದ್ದಾನೆ ಎಂದು ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ವಿಶ್ವಾಸ ವ್ಯಕ್ತಪಡಿಸಿದರು. ಹಟ್ಟಿಹೊಳಿಯಲ್ಲಿ ವೀರಭದ್ರೇಶ್ವರ ಹಾಗೂ ಸುಳೇಭಾವಿಯಲ್ಲಿ ಲಕ್ಷ್ಮೀ ಪೂಜೆ ಮಾಡಿದ್ದೇವೆ. ಗುರುಗಳನ್ನು ಮನೆಗೆ ಕರೆದು ಪಾದ ಪೂಜೆ ಮಾಡಿದ್ದು, ವಿಜಯಯಾತ್ರೆಯ ಸಂಕಲ್ಪ ಇಟ್ಟುಕೊಂಡು ಪೂಜೆ ಮಾಡಿದ್ದೇವೆ ಎಂದು ಹೇಳಿದರು.

ನಾಮಪತ್ರ ಸಲ್ಲಿಸುವ ವೇಳೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ, ಶಾಸಕರಾದ ಲಕ್ಷ್ಮಣ್ ಸವದಿ, ಪ್ರಕಾಶ್ ಹುಕ್ಕೇರಿ, ಮಹಾಂತೇಶ್ ಕೌಜಲಗಿ, ವಿಶ್ವಾಸ್ ವೈದ್ಯ, ಅಶೋಕ್ ಪಟ್ಟಣ್, ರಾಜು ಸೇಠ್, ಗಣೇಶ್ ಹುಕ್ಕೇರಿ, ಬಾಬಾ ಸಾಹೇಬ್ ಪಾಟೀಲ್, ರಾಜು ಕಾಗೆ ಸೇರಿದಂತೆ ಜಿಲ್ಲೆಯ ಎಲ್ಲಾ ಶಾಸಕರು, ಮುಖಂಡರು, ಅಪಾರ ಸಂಖ್ಯೆಯಲ್ಲಿ ಕಾರ್ಯಕರ್ತರರು ಹಾಜರಿರುವರು ಎಂದರು. ಜೊತೆಗೆ ಮಹಾರಾಷ್ಟ್ರದಿಂದ ಶಾಸಕ ದೀರಜ್ ದೇಶಮುಖ್ ಅವರು ಬರ್ತಿದ್ದಾರೆ ಎಂದರು.

ಬೆಳಗಾವಿ ಜಿಲ್ಲೆಯ ಮನೆ ಮಗನಿಗೆ ಸ್ವಾಭಿಮಾನಕ್ಕೆ ಮತ ನೀಡಿ ಎಂದು ಸಚಿವರು ಮನವಿ ಮಾಡಿದರು.

**ಬೆಳಗಾವಿಯ ಅಸ್ಮಿತೆಯ ಪ್ರಶ್ನೆ:** ನಮ್ಮ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು, ಕಾರ್ಯಕರ್ತರ ಶ್ರಮ ಈ ಬಾರಿ ಕಾಂಗ್ರೆಸ್ ಪಕ್ಷದ ಗೆಲುವಿಗೆ ಸಹಕಾರಿಯಾಗಲಿದೆ ಎಂದು ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಹೇಳಿದರು. ಪ್ರತಿ ವರ್ಗದ ಜನರ ಹತ್ತಿರ ಹೋಗಿದ್ದೇನೆ. ಬೆಳಗಾವಿ ಅಭಿವೃದ್ಧಿಯೇ ನನ್ನ ಕನಸು ಎಂದು ಹೇಳಿದರು.

ಈ ಬಾರಿ ಜನರು ಬೆಳಗಾವಿ ಯುವಕನ ಕೈ ಹಿಡಿಯುತ್ತಾರೆ ಎಂಬ ನಂಬಿಕೆ ಇದ್ದು, ಮನೆ ಮಗನಾಗಿ ನನ್ನನ್ನು ಸ್ವೀಕಾರ ಮಾಡಿದ್ದಾರೆ. ಯುವಕರ ಪ್ರತಿಯೊಂದು ಹಬ್ಬದಲ್ಲೂ ಸಹ ನಾವು ಭಾಗವಾಗಿದ್ದೇವೆ. ಈ ಬಾರಿ ಜನರು ಬದಲಾವಣೆಯನ್ನು ಬಯಸುತ್ತಿದ್ದಾರೆ ಎಂದು ಮೃಣಾಲ್ ಹೆಬ್ಬಾಳ್ಕರ್ ತಿಳಿಸಿದರು.

**ಸುಳೇಭಾವಿ ಮಹಾಲಕ್ಷ್ಮಿ, ಹಿಂಡಲಗಾ ಗಣಪತಿಗೆ ಪೂಜೆ:** ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕುಟುಂಬ ಸಮೇತ ಸುಳೇಭಾವಿಯಲ್ಲಿರುವ ಸುಪ್ರಸಿದ್ಧ ಶ್ರೀ ಮಹಾಲಕ್ಷ್ಮಿ ದೇವಸ್ಥಾನದಲ್ಲಿ, ಹಿಂಡಲಗಾ ಗಣಪತಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

## ಮಾಜಿ ಸಿಎಂ ಹೆಚ್ ಡಿಕೆ ಮತ್ತು ಮಾಜಿ ಶಾಸಕ ಸಂಜಯ್ ಪಾಟೀಲ್ ಗೆ ಮಹಿಳಾ ಆಯೋಗ ನೋಟಿಸ್ ಜಾರಿ



ಬೆಂಗಳೂರು: ಮಹಿಳೆಯರ ಬಗ್ಗೆ ಕೀಳುಮಟ್ಟದ ಭಾಷೆ ಬಳಕೆ ಮಾಡಬಾರದು. ಗಂಭಿರ ಸ್ವರೂಪ ಪಡೆದ್ರೆ ಜೈಲು ಶಿಕ್ಷೆ ಆಗುತ್ತದೆ. ಹೆಣ್ಣುಮಕ್ಕಳಿಗೆ ಅವಮಾನ ಮಾಡಿದರೆ ಹೇಗೆ?ಎಂದು ವಾಗ್ದಾಳಿ ಮಾಡಿದರು.

ಮಹಿಳೆಯರಿಗೆ ಅಪಮಾನ , ಘನತೆ ಮತ್ತು ಚಾರಿತ್ರ್ಯಕ್ಕೆ ಧಕ್ಕೆ ತಂದ ಆರೋಪದಡಿ ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿ ಮತ್ತು ಮಾಜಿ ಶಾಸಕ ಸಂಜಯ್ ಪಾಟೀಲ್ ಗೆ ರಾಜ್ಯ ಚುನಾವಣಾ ಆಯೋಗ ನೋಟಿಸ್ ನೀಡಿದೆ.

ಇಬ್ಬರು ನಾಯಕರ ವಿರುದ್ದ ರಾಜ್ಯ ಮಹಿಳಾ ಆಯೋಗ ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿಕೊಂಡು ನೋಟಿಸ್ ನೀಡಿದೆ. ಇಬ್ಬರೂ ನಾಯಕರು ಏಳು ದಿನಗಳೊಳಗೆ ಉತ್ತರ ನೀಡಬೇಕು ಎಂದು ಮಹಿಳಾ ಆಯೋಗ ಸೂಚಿಸಿದೆ.ಈ ಕುರಿತು ಮಾತನಾಡಿರುವ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀ ಚೌಧರಿ, ಒಬ್ಬರು ಪೆಗ್ ಅಂತಾರೆ, ಮತ್ತೊಬ್ಬರು ಗ್ಯಾರಂಟಿ ಯೋಜನೆ ವಿಚಾರದಲ್ಲಿ ಮಹಿಳೆಯರನ್ನು ಅವಮಾನ ಮಾಡುತ್ತಾರೆ . ಮಹಿಳೆಯರ ಬಗ್ಗೆ ಕೀಳುಮಟ್ಟದ ಭಾಷೆ ಬಳಕೆ ಮಾಡಬಾರದು.

ಗಂಭಿರ ಸ್ವರೂಪ ಪಡೆದ್ರೆ ಜೈಲು ಶಿಕ್ಷೆ ಆಗುತ್ತದೆ. ಹೆಣ್ಣುಮಕ್ಕಳಿಗೆ ಅವಮಾನ ಮಾಡಿದರೆ ಹೇಗೆ?ಎಂದು ವಾಗ್ದಾಳಿ ಮಾಡಿದರು.

ಕುರಿತು ಮಾತನಾಡಿರುವ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀ ಚೌಧರಿ, ಒಬ್ಬರು ಪೆಗ್ ಅಂತಾರೆ, ಮತ್ತೊಬ್ಬರು ಗ್ಯಾರಂಟಿ ಯೋಜನೆ ವಿಚಾರದಲ್ಲಿ ಮಹಿಳೆಯರನ್ನು ಅವಮಾನ ಮಾಡುತ್ತಾರೆ.

ಏ.13 ರಂದು ಹಿಂಡಲಗಾದಲ್ಲಿ ನಡೆದಿದ್ದ ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಬಿಜೆಪಿ ಕಾರ್ಯಕರ್ತರ ಸಮಾವೇಶದಲ್ಲಿ ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಉಸ್ತುವಾರಿ ಸಂಜಯ ಪಾಟೀಲ್ ಮಾತನಾಡಿ, “ಅಕ್ಕನ ಕ್ಷೇತ್ರದಲ್ಲಿಯೇ ಬಿಜೆಪಿ ಸಮಾವೇಶದಲ್ಲಿ ಅಪಾರ ಸಂಖ್ಯೆಯ ಮಹಿಳೆಯರು ಸೇರಿದ್ದಾರೆ. ಅಕ್ಕ ನಿದ್ದೆಗೆಡುವುದು ಗ್ಯಾರಂಟಿ.ಅವರಿಂದು ನಿದ್ದೆ ಮಾತ್ರೆ ತೆಗೆದುಕೊಳ್ಳಬೇಕು ಇಲ್ಲವೇ ಒಂದು ಎಕ್ಸ್ಟ್ರಾ ಪೆಗ್ ಹೆಚ್ಚುವರಿ ಕುಡಿಯಬೇಕು” ಎಂದು ಹೇಳಿಕೆ ನೀಡಿದ್ದರು.ಇನ್ನು ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿ ತುಮಕೂರಿನಲ್ಲಿ ಪ್ರಚಾರ ಸಭೆಯಲ್ಲಿ ಮಾತನಾಡಿ ಗ್ಯಾರಂಟಿಗಳಿಂದ ಹಳ್ಳಿ ಮಹಿಳೆಯರು ದಾರಿ ತಪ್ಪಿದ್ದಾರೆ ಎಂದು ಹೇಳಿಕೆ ನೀಡಿದ್ದರು.

## ಬಾಗಲಕೋಟೆ ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತ ಪಾಟೀಲ್ ನಾಮಪತ್ರ ಸಲ್ಲಿಕೆ



ಬಾಗಲಕೋಟೆ: ಬಾಗಲಕೋಟೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸಂಯುಕ್ತಾ ಪಾಟೀಲ್ ನಾಮಪತ್ರ ಸಲ್ಲಿಕೆ ಮಾಡಿದರು.

ಸೋಮವಾರ ಬೆಳಗ್ಗೆ ಬನಶಂಕರಿ ದೇವರ ದರ್ಶನ ಪಡೆದು ಹೆಗಲಿಗೆ ಕಂಬಳಿ ಹಾಕಿಕೊಂಡು ಹೋಗಿ ನಾಮಪತ್ರ ಸಲ್ಲಿಸಿದರು. ಇನ್ನು ಸಂಯುಕ್ತ ಪಾಟೀಲ್ ಅವರು ತಮ್ಮ ನಾಮಪತ್ರದಲ್ಲಿ ಆಸ್ತಿ ವಿವರ ಸಲ್ಲಿಸಿದ್ದು, ಅವರ ಪತಿಗಿಂತ ಅವರೇ ಶ್ರೀಮಂತರಾಗಿರುವುದು ವಿಶೇಷ. ಸಂಯುಕ್ತಾ ಪಾಟೀಲ್ ಚರಾಸ್ಥಿ ಒಟ್ಟು 93,66,574.74 ರೂ ಮೌಲ್ಯದಾಗಿದ್ದು, ಸ್ಥಿರಾಸ್ತಿ 1,12,77,550 ರೂ. ಇದೆ. ಇದರೊಂದಿಗೆ ಸಂಯುಕ್ತ ಪಾಟೀಲ್ ಅವರ ಒಟ್ಟು ಆಸ್ತಿ ಮೌಲ್ಯ 2 ಕೋಟಿ 6 ಲಕ್ಷದ 44 ಸಾವಿರದ 124 ರೂ. ಇದೆ ಎಂದು ಅಫಿಡೆವಿಟ್ನಲ್ಲಿ ಘೋಷಿಸಿಕೊಂಡಿದ್ದಾರೆ.


ಇನ್ನು ಸಂಯುಕ್ತ ಪಾಟೀಲ್ ಅವರ ಪತಿ ಶಿವಕುಮಾರ್ ಅವರ ಬಳಿ ಸ್ಥಿರಾಸ್ತಿ ಇಲ್ಲ. 1 ಕೋಟಿ 4 ಲಕ್ಷ 33 ಸಾವಿರ ರೂ. ಮೌಲ್ಯದ ಚರಾಸ್ತಿ ಮಾತ್ರ ಹೊಂದಿದ್ದಾರೆ. ಹಾಗೇ ಸಂಯುಕ್ತ ಪಾಟೀಲ್ ಮತ್ತು ಶಿವಕುಮಾರ್ ವಿವಿಧ ಬ್ಯಾಂಕ್ಗಳಲ್ಲಿ ಸಾಲ ಮಾಡಿಕೊಂಡಿದ್ದಾರೆ. ಸಂಯುಕ್ತಾ ಪಾಟೀಲ್ ಹೆಸರಲ್ಲಿ 3 ಲಕ್ಷ 95 ಸಾವಿರ ಸಾಲ ಇದ್ದರೆ, ಪತಿ ಶಿವಕುಮಾರ್ ಅವರು 59 ಲಕ್ಷದ 95 ಸಾವಿರದ 185 ರೂ ಸಾಲ ಹೊಂದಿದ್ದಾರೆ. ಇದರಲ್ಲಿ ಶಿವಕುಮಾರ್ ಅವರ ಶೈಕ್ಷಣಿಕ ಸಾಲ- 8 ಲಕ್ಷದ 95 ಸಾವಿರದ 180 ರೂ. ಇದೆ.

ಪತಿಗಿಂತ ಸಂಯುಕ್ತಾ ಪಾಟೀಲ್ ಶ್ರೀಮಂತೆ: ಸಂಯುಕ್ತಾ ಪಾಟೀಲ್ ಅವರ ಬಳಿ 500ಗ್ರಾಂ ಅಂದರೆ ಅರ್ಧ ಕೆಜಿ ಚಿನ್ನ ಮತ್ತು 5 ಕೆಜಿ ಬೆಳ್ಳಿ ಇದ್ದರೆ, ಪತಿ ಶಿವಕುಮಾರ್ ಅವರು 510 ಗ್ರಾಂ ಚಿನ್ನ ಹೊಂದಿದ್ದಾರೆ. ಇಷ್ಟೇ ಅಲ್ಲದೇ ಸಂಯುಕ್ತ ಪಾಟೀಲ್ ಸುಮಾರು 47 ಎಕರೆ ಭೂಮಿಯ ಒಡತಿಯಾಗಿದ್ದಾರೆ.

ಸಂಯುಕ್ತಾ ಪಾಟೀಲ್ 2 ಲಕ್ಷ 39 ಸಾವಿರ ನಗದು ಹಣ ಇದೆ. ಇನ್ನು ವಿವಿಧ ಬ್ಯಾಂಕ್ ಖಾತೆಯಲ್ಲಿ 57 ಲಕ್ಷದ 27 ಸಾವಿರದ 573 ರೂ. ಇದೆ. ಇನ್ನು ಪತಿ ಶಿವಕುಮಾರ್ ಕೈಯಲ್ಲಿ 1 ಲಕ್ಷದ 72 ಸಾವಿರ ರೂ.ನಗದು ಹಣ ಇದ್ದು, ವಿವಿಧ ಬ್ಯಾಂಕ್ ಖಾತೆಗಳಲ್ಲಿ 42 ಲಕ್ಷದ 49 ಸಾವಿರದ 270 ರೂ. ಇದೆ ಎಂದು ಅಫಿಡೆವಿಟ್ನಲ್ಲಿ ಮಾಹಿತಿ ನೀಡಿದ್ದಾರೆ.

ಪತಿ ಶಿವಕುಮಾರ್ ಕಡೆಯಿಂದ 3 ಲಕ್ಷ 95 ಸಾವಿರ ಸಾಲ ಪಡೆದುಕೊಂಡಿರುವ ಸಂಯುಕ್ತಾ ಪಾಟೀಲ್, ಬಳಿ ಯಾವುದೇ ವಾಹನಗಳಿಲ್ಲ. ಅಲ್ಲದೇ ಅವರ ವಿರುದ್ಧ ಯಾವುದೇ ಕ್ರಿಮಿನಲ್ ಪ್ರಕರಣಗಳು ಇಲ್ಲ.

# ಬಿಜೆಪಿಯಲ್ಲಿ ಯಾವುದೇ ಭಿನ್ನಾಪ್ರಾಯವಿಲ್ಲ: ಅಣ್ಣಾಸಾಹೇಬ ಜೊಲ್ಲೆ



ಚಿಕ್ಕೋಡಿ: ಚಿಕ್ಕೋಡಿ ಲೋಕಸಭೆ ಕ್ಷೇತ್ರ ವ್ಯಾಪ್ತಿಯ ನಾಲ್ಕು ವಿಧಾನಸಭಾ ಕ್ಷೇತ್ರದಲ್ಲಿ ಬೃಹತ್ ಸಭೆ ಮಾಡಲಾಗಿದೆ.

ಬಿಜೆಪಿಯಲ್ಲಿ ಯಾವುದೇ ಭಿನ್ನಾಪ್ರಾಯವಿಲ್ಲ ಎಂದು ಚಿಕ್ಕೋಡಿ ಲೋಕಸಭೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಹಾಗೂ ಸಂಸದ ಅಣ್ಣಾಸಾಹೇಬ ಜೊಲ್ಲೆ ಹೇಳಿದರು.

ಅವರು ತಮ್ಮ ಬೆಂಬಲಿಗರೊಂದಿಗೆ ಚಿಕ್ಕೋಡಿ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ ಚುನಾವಣಾಧಿಕಾರಿಗಳಿಗೆ ನಾಮ ಪತ್ರ ಸಲ್ಲಿಸಿ ಬಳಿಕ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 5 ಜನ ಕಾಂಗ್ರೆಸ್ ಅಭ್ಯರ್ಥಿಗಳಿದ್ದರು ಸಹ ನಮ್ಮಗೆ ಯಾವುದೇ ಸಮಸ್ಯೆ ಇಲ್ಲ. ವಿಧಾನಸಭೆ ಚುನಾವಣೆಯ ಬೇರೆ, ಲೋಕಸಭಾ ಚುನಾವಣೆಯ ಬೇರೆ ಎಂದರು.

ರಮೇಶ ಕತ್ತಿಯ ಮುನಿಸಿನ ಕುರಿತ ಪ್ರತಿಕ್ರಿಯಿಸಿದ ಅವರು ಕೇಲವೊಂದು ಕೆಲಸದಲ್ಲಿ ಮುನಿಸು ಇದ್ದರು ಸಹ ಅವರು ಪ್ರಚಾರಕ್ಕೆ ಬರುತ್ತಾರೆ ಎಂದರು.ಕೊವಿಡ್ ಹಾಗೂ ಪ್ರವಾಹ ಸಂಧರ್ಭದಲ್ಲಿ ನಾನು ನಮ್ಮ ಸಂಸ್ಥೆಯ ಸದಸ್ಯರು, ನಮ್ಮ ವ್ಯಾಪ್ತಿಯ ಶಾಸಕರು ಒಳ್ಳೆಯ ಕೆಲಸ ಮಾಡಿದ್ದಾರೆ.ಈ ಬಾರಿ ಜನರ ಬೆಂಬಲ ನೋಡಿದರೆ 2 ಲಕ್ಷಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಗೆಲವು ಸಾಧಿಸುತ್ತೇವೆ ಎಂದರು.

ಬಳಿಕ ಲೋಕಸಭಾ ಚುನಾವಣೆ ಪ್ರಭಾರಿ ಪಿ.ಎಚ್.ಪೂಜಾರ ಮಾತನಾಡಿ, ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿಪರ ಅಲೆ ಇದೆ.ಪ್ರಧಾನಿ ನರೇಂದ್ರ ಮೋದಿಯವರು ವಿಶ್ವನಾಯಕರಾಗಿ ಹೋರಹೊಮ್ಮಿದ್ದಾರೆ..ಮತ್ತೋಮ್ಮೆ ನರೇಂದ್ರ ಮೋದಿಯವರು ಪ್ರಧಾನಿ ಆಗುವುದು ನಿಶ್ಚಿತ ಎಂದರು.

ಅಣ್ಣಾಸಾಹೇಬ ಜೊಲ್ಲೆಯವರು ಮಾಡಿದ ಅಭಿವೃದ್ಧಿ ಹಾಗೂ ತಮ್ಮ ಸಂಸ್ಥೆಯ ಮೂಲಕ ಮಾಡಿರುವ ಉದ್ಯೋಗ ಸೃಷ್ಟಿ ಇವೆಲ್ಲ ಕಾರ್ಯಗಳನ್ನು ಜನರು ನೆನಪಿನಲ್ಲಿ ಇಟ್ಟುಕೊಂಡಿದ್ದಾರೆ.ಈ ಹಿನ್ನೆಲೆಯಲ್ಲಿ ಈ ಬಾರಿ ಅಣ್ಣಾಸಾಹೇಬ ಜೊಲ್ಲೆ ಗೆಲವು ನಿಶ್ಚಿತ ಎಂದರು.

ಜೆಡಿಎಸ್ ಮುಖಂಡ ಹಾಗೂ ಮಾಜಿ ಶಾಸಕ ಕಲ್ಲಪ್ಪಣಾ ಮಗೆನ್ನವರ ಮಾತನಾಡಿ, ಈ ಸಲ ಜೆಡಿ-ಎಸ್ ಹಾಗೂ ಬಿಜೆಪಿ ಒಟ್ಟಾರೆಯಾಗಿ ಚುನಾವಣೆ ಎದುರಿಸುತ್ತಿರುವುದರಿಂದ ನಮ್ಮೆಲ್ಲಾ ಕಾರ್ಯಕರ್ತರು ಬಿಜೆಪಿಗೆ ಬೆಂಬಲಿಸುವ ಮೂಲಕ ದೇಶದಲ್ಲಿ ಮತ್ತೋಮ್ಮೆ ನರೇಂದ್ರ ಮೋದಿಯವರ ನೇತೃತ್ವದ ಎನ್‌ಡಿಎ ಸರ್ಕಾರ ಬರುವಲ್ಲಿ ಕೈಜೋಡಿಸುತ್ತೇವೆ ಎಂದರು.

ನಿಪ್ಪಾಣಿ ಕ್ಷೇತ್ರದ ಶಾಸಕಿ ಹಾಗೂ ಮಾಜಿ ಸಚಿವೆ ಶಶಿಕಲಾ ಜೊಲ್ಲೆ,ಶಾಸಕ ದುರ್ಯೋಧನ ಐಹೊಳೆ, ಮಾಜಿ ಶಾಸಕರಾದ ಶ್ರೀಮಂತ ಪಾಟೀಲ, ಮಹೇಶ ಕುಮಟಳ್ಳಿ,ಚಿಕ್ಕೋಡಿ ಬಿಜೆಪಿ ಜಿಲ್ಲಾಧ್ಯಕ್ಷ ಸತೀಶ ಅಪ್ಪಾಜಿಗೋಳ,ಡಾ. ರಾಜೇಶ್ ನೇರ್ಲಿ,ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಶಾಂಭವಿ ಅಶ್ವಥ-'ಪುರ, ಶಿವಾನಂದ ನವಲಿಹಾಳ,ಅಮೃತ ಕುಲಕರ್ಣಿ,ಅಪ್ಪಾಸಾಹೇಬ ಚೌಗಲಾ ಇನ್ನಿತರರು ಉಪಸ್ಥಿತರಿದ್ದರು.

# ರಾಜ್ಯಕ್ಕೆ ಮಾದರಿಯಾದ ಪೂರ್ವ ಸಿದ್ಧತಾ ಪರೀಕ್ಷೆಗಳು



ಬೆಳಗಾವಿ: ರಾಜ್ಯದಲ್ಲಿಯೇ ಪ್ರಥ-'ಮ ಬಾರಿಗೆ ಜಿಲ್ಲೆಯ ಎಲ್ಲ ಸರಕಾರಿ ಕಾಲೇಜುಗಳಲ್ಲಿ ಶುಕ್ರವಾರ ಚಿಕ್ಕೋಡಿ ಹಾಗೂ ಬೆಳಗಾವಿ ಶೈಕ್ಷಣಿಕ ಜಿಲ್ಲೆಗಳ ಸರಕಾರಿ ಪದವಿ ಪೂರ್ವ ವಿದ್ಯಾರ್ಥಿಗಳಿಗೆ ಸಿಇಟಿ, ಜೆಇಇ, ಎನ್‌ಇಇಟಿ ಸಂಬಂಧಿಸಿದಂತೆ ಉಚಿತ ಪೂರ್ವ ಸಿದ್ಧತೆಗಾಗಿ ಪರೀಕ್ಷೆಗಳನ್ನು ನಡೆಸುವ ಮೂಲಕ ಮಾದರಿಯಾಗಿದೆ.

ಜಿಪಂ ಸಿಇಒ ರಾಹುಲ್ ಶಿಂಧೆ ಅವರು, ಇದು ಪದವಿ ಪೂರ್ವ ಕಾಲೇಜು ಹಾಗೂ ಅಪೆಕ್ಸ್ ವೆಲ್ಫೇರ್ ಶಿಕ್ಷಣ ಸಂಸ್ಥೆಯಿಂದ ಸಾಧ್ಯವಾಗಿದೆ. ಒಟ್ಟು ಮೂರು ಹಂತಗಳಲ್ಲಿ ಪೂರ್ವ ಸಿದ್ಧತೆ ಪರೀಕ್ಷೆಗಳನ್ನು ಜಿಲ್ಲೆಯಾದ್ಯಂತ ತೆಗೆದುಕೊಳ್ಳಲಾಗಿದೆ. ಇದರಿಂದ ಸಾವಿರಾರು ವಿದ್ಯಾರ್ಥಿಗಳು ಭಾಗವಹಿಸಿ ಇದರ ಸದುಪಯೋಗ ಪಡೆದುಕೊಂಡಿದ್ದಾರೆ ಎಂದು ತಿಳಿಸಿದರು.

ಪರೀಕ್ಷೆಗಾಗಿ ಭಾಗವಹಿಸಿದ ಸಾವಿರಾರು ವಿದ್ಯಾರ್ಥಿಗಳಿಗೆ ಅಪೆಕ್ಸ್ ವೆಲ್ಫೇರ್ ಶಿಕ್ಷಣ ಸಂಸ್ಥೆ ಮುಂದೆ ಬಂದು ಉಚಿತವಾಗಿ ಪ್ರಶ್ನೆ ಪತ್ರಿಕೆ ಹಾಗೂ ಒ.ಎಂ.ಆರ್. ಶೀಟ್ ನೀಡಿರುವುದು ಅನುಕೂಲವಾಗಿವೆ. ಸರಕಾರಿ ಪದವಿ ಪೂರ್ವ ವಿದ್ಯಾರ್ಥಿಗಳು ನೀಟ್ ಮತ್ತು ಸಿಇಟಿ ಹಾಗೂ ಜೆಇಇ ಅಂತಹ ಪರಿಕ್ಷೆಗಳಲ್ಲಿ ಪೂರ್ವ ತಯಾರಿ ಹಾಗೂ ಹಿಂಜರಿಕೆಯಿಂದ ಫಲಿತಾಂಶ ಕಡಿಮೆಯಾಗುವ ಸಾಧ್ಯತೆ ಇರುತ್ತದೆ. ಅದ್ದರಿಂದ ಪರೀಕ್ಷೆಗಳಲ್ಲಿ ಕಂಡು ಬರುವ ಪ್ರಶ್ನೆಗಳ ಶೈಲಿ ಮತ್ತು ಕಠಿಣತೆ ಅರಿಯುವಂತೆ ಮಾಡುವುದು.

ಸಮಯ ಪ್ರಜ್ಞೆ ಮೈಗೂಡಿಸಿ ಯಾವ ಪ್ರಶ್ನೆ ಎಷ್ಟು ಸಮಯ ನೀಡಬೇಕು.

ಪ್ರಶ್ನೆ ಪತ್ರಿಕೆಯ ಮಾದರಿ ಯಾವ ರೀತಿಯಾಗಿ ಇರುತ್ತದೆ. ಯಾವ ವಿಷಯದ ಕುರಿತು ಹೆಚ್ಚಿನ ಪ್ರಶ್ನೆಗಳು ಬರುತ್ತವೆ.

ಪ್ರಶ್ನೆಗಳಿಗೆ ಎಷ್ಟು ಉತ್ತರ ನೀಡಬೇಕು ಎಂಬ ಮಾಹಿತಿಯನ್ನು ಪೂರ್ವ ತಯಾರಿಕೆಯಲ್ಲಿ ಮಕ್ಕಳಿಗೆ ತಿಳಿಸುವುದರ ಮೂಲಕ ಮುಂಬರುವ ಸಿಇಟಿ, ಜೆಇಇ, ನೀಟ್ ಸಿದ್ಧತೆ ಮಾಡಿಕೊಳ್ಳಲು ಮಕ್ಕಳಿಗೆ ತುಂಬಾ ಅನುಕೂಲವಾಗಿದೆ.

ಪೂರ್ವ ಪರಿಕ್ಷೆಯಲ್ಲಿ ಕಂಡು ಬಂದ ನ್ಯೂನ್ಯತೆಗಳು ಹಾಗೂ ಸರಿಪಡಿಸಿಕೊಂಡು ಪರೀಕ್ಷೆಗಳಲ್ಲಿ ಉತ್ತಮ ಫಲಿತಾಂಶ ಪಡೆಯಲು ಸಾಧ್ಯ. ಇದರಿಂದ ವಿದ್ಯಾರ್ಥಿಗಳಿಗೆ ಮಾನಸಿಕವಾಗಿ ಹಾಗೂ ಭೌದ್ಧಿಕವಾಗಿ ತಯಾರಾಗಲೂ ಬಹಳಷ್ಟು ಸಹಾಯಕಾರಿಯಾಗಿದೆ ಎಂದು ತಿಳಿಸಿದ್ದಾರೆ.

ಡಿಡಿಪಿಯುಗಳಾದ ಎಂ.ಎಂ. ಕಾಂಬಳೆ, ಪಿ.ಐ. ಭಂಡಾರಿ, ಅಪೆಕ್ಸ್ ವೆಲ್ಫೇರ್ ಮತ್ತು ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ನಾಗರಾಜ ತೊರವಿ ಅವರು ಪರೀಕ್ಷೆಗಳ ಜವಾಬ್ದಾರಿ ವಹಿಸಿ ಯಶಸ್ಸಿಗೊಳಿಸಿದ್ದಾರೆ.

## ಅಕ್ರಮ ಮರಳು ಸಾಗಿಸ್ತಿದ್ದ ಟ್ರ್ಯಾಕ್ಟರ್ನ ಓವರ್ ಟೇಕ್ ಮಾಡುವಾಗ ಪೊಲೀಸ್ ಜೀಪ್ ಪಲ್ಟಿ




ರಾಯಚೂರು: ಮರಳು ವಾಹನ ಸೀಜ್ ಮಾಡಲು ಹೋಗುವಾಗ ಪೊಲೀಸ್ ಜೀಪ್ ಪಲ್ಟಿಯಾದ ಘಟನೆ ಜಿಲ್ಲೆಯ ಸಿಂಧನೂರು ತಾಲೂಕಿನ ರೈತನಗರ ಕ್ಯಾಂಪ್ ಬಳಿ ನಡೆದಿದೆ.

ಮರಳಿನ ಟ್ರ್ಯಾಕ್ಟರ್ ಓವರ್ ಟೇಕ್ ಮಾಡಲು ಹೋದಾಗ ವಾಹನ ಪಲ್ಟಿಯಾಗಿದೆ. ಅಪಘಾತದಲ್ಲಿ ಹೋಂ ಗಾರ್ಡ್ ಶಕ್ಷಾವಲಿ (33), ಪೇದೆ ಕರಿಯಪ್ಪ (35) ಎಂಬುವವರಿಗೆ ಗಾಯವಾಗಿದೆ. ಅಕ್ರಮವಾಗಿ ಸಾಗಿಸುತ್ತಿದ್ದ ಮರಳಿನ ಟ್ರ್ಯಾಕ್ಟರ್ ತಡೆಯಲು ಹೋಗಿ ದುರ್ಘಟನೆ ಸಂಭವಿಸಿದೆ.

ಗಾಯಾಳುಗಳನ್ನ ಸಿಂಧನೂರು ತಾಲೂಕು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಸಿಂಧನೂರು ಟ್ರಾಫಿಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕೊನೆಗೆ ಅಕ್ರಮ ಮರಳು ಸಾಗಾಟ ಮಾಡುತ್ತಿದ್ದ ವಾಹನವನ್ನು ಸೀಜ್ ಮಾಡಲಾಗಿದೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089